WPP-47 / 2009-2011



# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

| ಸಂಪುಟ ೧೪೬ | ಬೆಂಗಳೂರು, ಗುರುವಾರ, ಡಿಸೆಂಬರ್ ೮, ೨೦೧೧ (ಮಾರ್ಗಶಿರ ೧೭, ಶಕ ವರ್ಷ ೧೯೩೩) | ಸಂಚಿಕೆ ೪೮ |
|---|---|---|

## ಭಾಗ – ೫

## ಸರ್ಕಾರದ ಮತ್ತು ಖಾಸಗಿ ಜಾಹೀರಾತುಗಳು, ಲೋಕಸೇವಾ ಆಯೋಗದ ಜಾಹೀರಾತುಗಳು, ನೇಮಕಾತಿ ಸಮಿತಿಗಳ ಜಾಹೀರಾತುಗಳು

**OFFICE OF THE PRL.DISTRICT & SESSIONS JUDGE,BIJAPUR.**

**Notice U/R 6(2) of the Notaries Rules, 1956.**

**BIJAPUR DATED. 4TH DAY OF NOVEMBER, 2011.**

Whereas the below mentioned Advocates of Bijapur have made the applications Under Rule 4(2) of the Notaries Rules, 1956 for appointing them as a Notary in the form of Memorial for Revenue taluka of Bijapur. Therefore, objections if any, for the appointment of the below mentioned applicant as Notary for Revenue Taluka of Bijapur be submitted to the undersigned within 14 days from the date of publication of this notice.

| Sl.No. | Name of the Advocate.<br>Sriyuths: | Date of enrollment in Bar Council. |
|---|---|---|
| 1. | B.K. Chalawadi Adv. Bijapur. | 7.7.1988 |
| 2. | S.M.Aloor, Adv. Bijapur. | 31.8.1989 |
| 3. | R.S.Pattanashetty, Adv. Bijapur. | 23.6.1990 |
| 4. | M.A.Mulla, Adv. Bijapur. | 19.12.1992 |
| 5. | A.V.Pattanashetty, Adv. Bijapur. | 6.2.1993 |
| 6. | S.L. Kalal, Adv. Bijapur. | 24.7.1993 |
| 7. | R.M.Patil, (Talikoti) Adv. Bijapur. | 8.1.1994 |
| 8. | G.S.Niranjanamath, Adv. Bijapur. | 8.1.1994 |
| 9. | D.N.Dandinavar, Adv. Bijapur. | 6.1.1996. |
| 10. | Prabhakar H. Adv. Bijapur. | 7.6.1997. |
| 11. | S.L. Mayur, Adv. Bijapur. | 7.6.1997. |

| Sl.No. | Name of the Advocate. Sriyuths: | Date of enrollment in Bar Council. |
|---|---|---|
| 12. | Smt. Geetanjali S. Kalyani, Adv.Bijapur. | 12.7.1997. |
| 13. | Miss.Sunanda R. Patil, Adv.Bijapur. | 14.3.1998 |
| 14. | K.M.Kudalagi, Adv. Bijapur. | 01.8.1998. |
| 15. | S.S.Pujar, Adv. Bijapur. | 24.7.1999. |
| 16. | S.M.Kumatagi, Adv. Bijapur. | 31.7.1999. |
| 17. | S.B.Hiremath, Adv. Bijapur. | 22.1.2000. |
| 18. | A.K.Binjageri, Adv. Bijapur. | 29.7.2000. |
| 19. | P.M.Jakati, Adv. Bijapur. | 29.7.2000. |
| 20. | S.R.Sidareddy, Adv. Bijapur. | 18.11.2000. |
| 21. | J.M.Bhusagond, Adv. Bijapur. | 18.8.2001. |
| 22. | P.V.Bondarde, Adv. Bijapur. | 25.8.2001. |

**L.Subramanya,**
Pril. District & Sessions Judge,
Bijapur.

**PR - 328**

**ಅಧ್ಯಕ್ಷರು, ಆಯ್ಕೆ ಮತ್ತು ನೇಮಕಾತಿ ಪ್ರಾಧಿಕಾರ ಹಾಗೂ ಜಿಲ್ಲಾಧಿಕಾರಿಗಳು, ದಾವಣಗೆರೆ ಜಿಲ್ಲೆ**

**ಸಂ. ಗ್ರಾಲೆ/ಸಿಬ್ಬಂದಿ/ವಿವ/28/11-12, ದಿನಾಂಕ: 15/11/2011**

**ಅಧಿಸೂಚನೆ**

**ವಿಷಯ:** ದಾವಣಗೆರೆ ಜಿಲ್ಲಾ ಕಂದಾಯ ಇಲಾಖೆಯಲ್ಲಿ ಖಾಲಿ ಇರುವ ಗ್ರಾಮ ಲೆಕ್ಕಾಧಿಕಾರಿಗಳ ಹುದ್ದೆಯನ್ನು ನೇರ ನೇಮಕಾತಿ ಮೂಲಕ ಭರ್ತಿಮಾಡುವ ಬಗ್ಗೆ.

**ಉಲ್ಲೇಖ** : ಸರ್ಕಾರದ ಅಧಿಸೂಚನೆ ಸಂ. ಕಂಇ 04 ಬಿಎಸ್‌ಸಿ 2011 ದಿ: 25.2.2011

ಕರ್ನಾಟಕ ಸರ್ಕಾರದ ಕಂದಾಯ ಇಲಾಖೆಯ ದಾವಣಗೆರೆ ಜಿಲ್ಲಾ ಘಟಕದಲ್ಲಿ ಬರುವ ತಾಲ್ಲೂಕುಗಳಲ್ಲಿ 2009ನೇ ಸಾಲಿನಲ್ಲಿ 42 ಗ್ರಾಮ ಲೆಕ್ಕಾಧಿಕಾರಿಗಳ ಹುದ್ದೆಗಳ ನೇರ ನೇಮಕಾತಿಗೆ ಅಧಿಸೂಚನೆ ಹೊರಡಿಸಲಾಗಿತ್ತು. ಸದರಿ ಹುದ್ದೆಗಳಲ್ಲಿ 2 ಹುದ್ದೆಗಳು ಖಾಲಿ ಉಳಿದಿವೆ. ಆನಂತರ ವಯೋನಿವೃತ್ತಿ, ರಾಜೀನಾಮೆ, ಮುಂಬಡ್ತಿ, ವರ್ಗಾವಣೆ ಇನ್ನಿತರೆ ಕಾರಣಗಳಿಗಾಗಿ ಹುದ್ದೆಗಳು ತೆರವಾಗಿವೆ. ಆದುದರಿಂದ, ಗ್ರಾಮ ಲೆಕ್ಕಾಧಿಕಾರಿಗಳ ಹುದ್ದೆಗಳನ್ನು ಕರ್ನಾಟಕ ಸಾಮಾನ್ಯ ಸೇವೆಗಳು (ರೆವಿನ್ಯೂ ಸಬಾರ್ಡಿನೇಟ್ ಬ್ರಾಂಚ್) (ಕೇಡರ್ ಅಂಡ್ ರಿಕ್ರ್ಯೂಟ್‌ಮೆಂಟ್) (ತಿದ್ದುಪಡಿ)ನಿಯಮಗಳು 2008 ಮತ್ತು 2009ರನ್ವಯ ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಸರ್ಕಾರದ ಪತ್ರ ಸಂ. ಕಂಇ 04 ಬಿಎಸ್‌ಸಿ 2011 ದಿ:25.2.2011ರಲ್ಲಿ ಅನುಮೋದನೆ ನೀಡಿದೆ. ಅದರಂತೆ, ಒಟ್ಟು **22** ಗ್ರಾಮ ಲೆಕ್ಕಾಧಿಕಾರಿಗಳ ಹುದ್ದೆಗಳನ್ನು ನೇರ ನೇಮಕಾತಿಯಿಂದ ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿಯನ್ನು ಆಹ್ವಾನಿಸಲಾಗಿದೆ.

ಅರ್ಹ ಅಭ್ಯರ್ಥಿಗಳು ಭರ್ತಿ ಮಾಡಿದ ನಿಗದಿತ ನಮೂನೆಯಲ್ಲಿ ಎಲ್ಲಾ ವಿವರಗಳೊಂದಿಗೆ **ಅಧ್ಯಕ್ಷರು, ಆಯ್ಕೆ ಮತ್ತು ನೇಮಕಾತಿ ಪ್ರಾಧಿಕಾರ ಹಾಗೂ ಜಿಲ್ಲಾಧಿಕಾರಿಗಳು, ದಾವಣಗೆರೆ ಜಿಲ್ಲೆ** ಇವರಿಗೆ ದಿನಾಂಕ:16.12.2011 ರಂದು 5.00 ಗಂಟೆಯೊಳಗೆ ಅಥವಾ ಅದಕ್ಕೂ ಮುಂಚಿತವಾಗಿ ತಲುಪುವಂತೆ ಅಂಚೆ ಅಥವಾ ಕೊರಿಯರ್ ಮೂಲಕ ಮಾತ್ರ ಕಳುಹಿಸುವುದು. ಹುದ್ದೆಗಳ ಸಂಖ್ಯೆಯನ್ನು ಕಡಿಮೆ ಅಥವಾ ಹೆಚ್ಚು ಮಾಡುವುದಕ್ಕೆ ಜಿಲ್ಲಾಧಿಕಾರಿಗಳಿಗೆ ಮಾತ್ರ ಅಧಿಕಾರವಿರುತ್ತದೆ. ಅರ್ಜಿಗಳನ್ನು ಮುದ್ದಾಂ ಸ್ವೀಕರಿಸಲಾಗುವುದಿಲ್ಲ.

**ಹುದ್ದೆಗಳ ವಿವರ**

| ಕ್ರಸಂ | ಹುದ್ದೆಯ ಹೆಸರು | ಒಟ್ಟು ಹುದ್ದೆ | ವಿದ್ಯಾರ್ಹತೆ | ವೇತನ ಶ್ರೇಣಿ |
|---|---|---|---|---|
| 1 | ಗ್ರಾಮ ಲೆಕ್ಕಿಗ | **22** | ಪಿ.ಯು.ಸಿ. ಅಥವಾ 12ನೇ ತರಗತಿ (ಸಿಬಿಎಸ್‌ಸಿ / ಐಸಿಎಸ್‌ಇ) ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು | 5800–10500 |

## ಹುದ್ದೆಗಳ ವರ್ಗೀಕರಣ

### 2009–10ನೇ ಸಾಲಿನಲ್ಲಿ ನೇರ ನೇಮಕಾತಿಯಿಂದ ಭರ್ತಿಯಾಗದೇ ಉಳಿದ ಖಾಲಿ ಹುದ್ದೆಗಳು

| ಕ್ರಸಂ | ಹುದ್ದೆಯ ಹೆಸರು | ಒಟ್ಟು ಹುದ್ದೆ | ವರ್ಗೀಕರಣ | | | | | | | | |
|---|---|---|---|---|---|---|---|---|---|---|---|
| | | | | ಇತರೆ | ಮಹಿಳೆ | ಗ್ರಾಮೀಣ | ಅಂ.ವಿ | ಮಾ.ಸೈ. | ಕ.ಮಾ.ಅ. | ಯೋ.ನಿರಾ | **ಒಟ್ಟು** |
| 1 | ಗ್ರಾಮ ಲೆಕ್ಕಿಗ | 2 | ಪ.ಜಾ | – | – | – | **1** | – | – | – | **1** |
| | | | ಪ.ಪಂ. | – | – | – | – | – | – | – | – |
| | | | ಪ್ರ.1 | – | – | – | – | – | – | – | – |
| | | | ಪ್ರ.2(ಎ) | – | – | – | – | – | – | – | – |
| | | | ಪ್ರ.2(ಬಿ) | – | – | – | – | – | – | – | – |
| | | | ಪ್ರ.3(ಎ) | – | – | – | – | – | – | – | – |
| | | | ಪ್ರ.3(ಬಿ) | – | – | – | – | – | – | – | – |
| | | | ಸಾ.ಅ. | – | – | – | – | **1** | – | – | **1** |
| | | | | | | | | | | **ಒಟ್ಟು** | 2 |

### 2011–12ನೇ ಸಾಲಿನಲ್ಲಿ ಖಾಲಿ ಇರುವ ಹುದ್ದೆಗಳ ವರ್ಗೀಕರಣ

| ಕ್ರಸಂ | ಹುದ್ದೆಯ ಹೆಸರು | ಒಟ್ಟು ಹುದ್ದೆ | ವರ್ಗೀಕರಣ | | | | | | | | |
|---|---|---|---|---|---|---|---|---|---|---|---|
| | | | | ಇತರೆ | ಮಹಿಳೆ | ಗ್ರಾಮೀಣ | ಅಂ.ವಿ | ಮಾ.ಸೈ. | ಕ.ಮಾ.ಅ. | ಯೋ.ನಿರಾ | **ಒಟ್ಟು** |
| 1 | ಗ್ರಾಮ ಲೆಕ್ಕಿಗ | **20** | ಪ.ಜಾ | – | **1** | **1** | – | **1** | – | – | **3** |
| | | | ಪ.ಪಂ. | – | – | – | – | – | – | – | – |
| | | | ಪ್ರ.1 | – | – | **1** | – | – | – | – | **1** |
| | | | ಪ್ರ.2(ಎ) | **1** | **1** | **1** | – | – | – | – | **3** |
| | | | ಪ್ರ.2(ಬಿ) | – | – | **1** | – | – | – | – | **1** |
| | | | ಪ್ರ.3(ಎ) | – | **1** | – | – | – | – | – | **1** |
| | | | ಪ್ರ.3(ಬಿ) | – | – | **1** | – | – | – | – | **1** |
| | | | ಸಾ.ಅ. | **3** | **3** | **2** | **1** | **1** | – | – | **10** |
| | | | | | | | | | | **ಒಟ್ಟು** | **20** |

1) ಮಾ.ಸೈ – ಮಾಜಿ ಸೈನಿಕರು 2) ಕ.ಮಾ.ಅ– ಕನ್ನಡ ಮಾಧ್ಯಮ ಅಭ್ಯರ್ಥಿ

3) ಯೋ.ನಿರಾ– ಯೋಜನಾ ನಿರಾಶ್ರೀತರು 4) ಅಂ.ವಿ.– ಅಂಗವಿಕಲರು

**ಅಭ್ಯರ್ಥಿಗಳಿಗೆ ಸೂಚನೆ ಮತ್ತು ಷರತ್ತುಗಳು :**

1. **ಅರ್ಜಿಗಳನ್ನು ಅಂಚೆ ಅಥವಾ ಕೊರಿಯರ್ ಮೂಲಕ ಮಾತ್ರ ಕಳುಹಿಸತಕ್ಕದ್ದು. ಖುದ್ದಾಗಿ ಸ್ವೀಕರಿಸಲಾಗುವುದಿಲ್ಲ.**
2. **ವಯೋಮಿತಿ :** ಅರ್ಜಿ ಸಲ್ಲಿಸಲು ಕೊನೆಯ ದಿನಾಂಕದಂದು ಕೆಳಕಂಡ ವಯೋಮಿತಿ ಹೊಂದಿರತಕ್ಕದ್ದು.

| | | | |
|---|---|---|---|
| ಪ.ಜಾ. / ಪ.ಪಂ., ಪ್ರವರ್ಗ–1 | : | ಕನಿಷ್ಠ –18 | ಗರಿಷ್ಠ–40 |
| ಹಿಂದುಳಿದ ವರ್ಗ | : | ಕನಿಷ್ಠ –18 | ಗರಿಷ್ಠ–38 |
| ಸಾಮಾನ್ಯ ವರ್ಗ | : | ಕನಿಷ್ಠ –18 | ಗರಿಷ್ಠ–35 |

ಈ ಕೆಳಗಿನ ಸಂದರ್ಭಗಳಲ್ಲಿ ನೇಮಕಾತಿಯ ಗರಿಷ್ಠ ವಯೋಮಿತಿಯನ್ನು ಕೆಳಗೆ ತಿಳಿಸಿರುವಷ್ಟರ ಮಟ್ಟಿಗೆ ಹೆಚ್ಚಿಸಲಾಗುವುದು.

ಅ) ಅಭ್ಯರ್ಥಿಯು ಮಾಜಿ ಸೈನಿಕನಾಗಿದ್ದಲ್ಲಿ ಅವನು ಕೇಂದ್ರ ಸಶಸ್ತ್ರ ದಳದಲ್ಲಿ ಎಷ್ಟು ವರ್ಷ ಸೇವೆ ಸಲ್ಲಿಸಿರುವನೋ ಅಷ್ಟು ವರ್ಷಗಳಿಗೆ ಮೂರು ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳು

ಆ) ಅಭ್ಯರ್ಥಿಯು ಅಂಗವಿಕಲನಾಗಿದ್ದರೆ 10 ವರ್ಷಗಳು

ಇ) ಅಭ್ಯರ್ಥಿಯು ವಿಧವೆಯಾಗಿದ್ದಲ್ಲಿ 10 ವರ್ಷಗಳು

3. ಅಭ್ಯರ್ಥಿಗಳಿಗೆ ಕನ್ನಡ ಭಾಷಾ ಜ್ಞಾನದ ಅವಶ್ಯಕತೆ ಕಡ್ಡಾಯವಾಗಿರುತ್ತದೆ.

4. ಅಭ್ಯರ್ಥಿಗಳು ನಿಗಧಿತ ನಮೂನೆಯಲ್ಲಿ ಮಾತ್ರ ಅರ್ಜಿ ಸಲ್ಲಿಸಬೇಕು. ಅರ್ಜಿಯನ್ನು **ಜಿಲ್ಲಾಧಿಕಾರಿಗಳ ಕಚೇರಿಯ ವೆಬ್‌ಸೈಟ್ http://davanagere.nic.in ಯಿಂದ** Download **ಮಾಡಿಕೊಳ್ಳುವುದು. ಅರ್ಜಿಗಳನ್ನು ಜಿಲ್ಲಾಧಿಕಾರಿಗಳ ಕಚೇರಿಯಿಂದ ಒದಗಿಸಲಾಗುವುದಿಲ್ಲ.** ಲಕೋಟೆಯ ಮೇಲೆ ಅರ್ಜಿ ಸಲ್ಲಿಸುವ ಹುದ್ದೆಯ ಹೆಸರು ನಮೂದಿಸಿರಬೇಕು.

5. ನಿಗಧಿತ ದಿನಾಂಕದ ನಂತರ ಸಲ್ಲಿಸಿದ ಅರ್ಜಿಯನ್ನು ಪರಿಗಣಿಸಲಾಗುವುದಿಲ್ಲ.

6. ಸರ್ಕಾರಿ ಇಲಾಖೆಯಲ್ಲಿ ಸೇವೆ ಸಲ್ಲಿಸುತ್ತಿರುವ ಅಭ್ಯರ್ಥಿಗಳು ಅರ್ಜಿಯನ್ನು ನೇಮಕಾತಿ ಪ್ರಾಧಿಕಾರ / ಇಲಾಖಾ ಮುಖ್ಯಸ್ಥರ ಮುಖಾಂತರ ಅರ್ಜಿಯನ್ನು ಸಲ್ಲಿಸುವುದು

7. ಅಭ್ಯರ್ಥಿಯು ತನ್ನ ಇತ್ತೀಚಿನ ಭಾವಚಿತ್ರವೊಂದನ್ನು ಅರ್ಜಿಯ ಬಲಗಡೆ ಮೇಲ್ಭಾಗದಲ್ಲಿ ಅಂಟಿಸಬೇಕು.

8. ಅಭ್ಯರ್ಥಿಗಳ ಆಯ್ಕೆ ಬಗ್ಗೆ ಪ್ರಚಾರ ಅಥವಾ ಶಿಫಾರಸ್ಸುಗಳನ್ನು ಮಾಡಿದರೆ ಅಂಥವರ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

9. ಅರ್ಜಿದಾರರೊಡನೆ ಪತ್ರ ವ್ಯವಹಾರಕ್ಕೆ ಅವಕಾಶವಿರುವುದಿಲ್ಲ.

10. ಜಾತಿ ಅಡಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳು ಜಾತಿ ಪ್ರಮಾಣ ಪತ್ರದ ಬಗ್ಗೆ ಜಿಲ್ಲಾಧಿಕಾರಿಗಳು (ಅಧ್ಯಕ್ಷರು ಮತ್ತು ಜಾತಿ ಆದಾಯ ಪರಿಶೀಲನಾ ಸಮಿತಿ) ರವರಿಂದ ಸಿಂಧುತ್ವ ಪ್ರಮಾಣ ಪತ್ರ ಪಡೆದ ನಂತರ ನೇಮಕಾತಿ ಆದೇಶ ನೀಡಲಾಗುವುದು.

11. ನೇಮಕಾತಿ ಬಗ್ಗೆ ಅಂತಿಮ ತೀರ್ಮಾನವನ್ನು ನೇಮಕಾತಿ ಪ್ರಾಧಿಕಾರಿಯಾದ ಜಿಲ್ಲಾಧಿಕಾರಿಗಳು, ದಾವಣಗೆರೆ ರವರು ಕಾಯ್ದಿರಿಸಿಕೊಂಡಿರುತ್ತಾರೆ.

**12.** ಪ.ಜಾತಿ / ಪ.ಪಂಗಡ ಮತ್ತು ಪ್ರವರ್ಗ–1 ಅಭ್ಯರ್ಥಿಗಳು ರೂ.100/– ಹಾಗೂ ಇತರರಿಗೆ ರೂ.200/–ಗಳಿಗೆ ಬ್ಯಾಂಕ್ ಡಿ.ಡಿ.ಯನ್ನು **ಜಿಲ್ಲಾಧಿಕಾರಿಗಳು, ದಾವಣಗೆರೆ ಜಿಲ್ಲೆ** ಇವರ ಹೆಸರಿಗೆ ಪಡೆದು ಅರ್ಜಿಯೊಂದಿಗೆ ಲಗತ್ತಿಸತಕ್ಕದ್ದು ಮತ್ತು ಡಿ.ಡಿ.ಗಳನ್ನು ಯಾವುದಾದರೂ ರಾಷ್ಟ್ರೀಕೃತ ಬ್ಯಾಂಕುಗಳಲ್ಲಿ ಮಾತ್ರ ಖರೀದಿಸತಕ್ಕದ್ದು ಹಾಗೂ **ಡಿ.ಡಿ.ಯ ಹಿಂದೆ ಹೆಸರು ಮತ್ತು ವಿಳಾಸವನ್ನು ನಮೂದಿಸತಕ್ಕದ್ದು. ಡಿ.ಡಿ.ಗಳನ್ನು ಲಗತ್ತಿಸದ ಅರ್ಜಿಗಳನ್ನು ತಿರಸ್ಕರಿಸಲಾಗುವುದು.**

13. ಸಹಿ ಮಾಡದಿರುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

**14. ಆಯ್ಕೆಯನ್ನು ಅಭ್ಯರ್ಥಿಯ ಮೆರಿಟ್ ಆಧಾರದ ಮೇಲೆ ಮಾತ್ರ ಪರಿಗಣಿಸಲಾಗುವುದು.**

**15. ಅಂಚೆ ವಿಳಂಬಕ್ಕೆ ಜಿಲ್ಲಾಧಿಕಾರಿಗಳ ಕಚೇರಿ ಜವಾಬ್ದಾರರಾಗುವುದಿಲ್ಲ.**

**16. ಜಾತಿ / ಮೀಸಲಾತಿ ಪ್ರಮಾಣ ಪತ್ರಗಳು :**

ಮೀಸಲಾತಿ ಸೌಲಭ್ಯ ಅಪೇಕ್ಷಿಸುವ ಅಭ್ಯರ್ಥಿಗಳು ಈ ಕೆಳಕಂಡ ದಾಖಲೆಗಳ ಪ್ರತಿಗಳನ್ನು ಅರ್ಜಿ ಸಲ್ಲಿಸುವ ದಿನಾಂಕದಂದು ನಿಗಧಿತ ನಮೂನೆಯಲ್ಲಿ ಸಂಬಂಧಪಟ್ಟ ರೆವಿನ್ಯೂ ಪ್ರಾಧಿಕಾರದಿಂದ ಪಡೆದು ಲಗತ್ತಿಸಬೇಕು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಿ ಅವರ ಅಭ್ಯರ್ಥಿತನವನ್ನು ನಿಯಮಾನುಸಾರ ಸಾಮಾನ್ಯ ಅರ್ಹತೆಯಡಿಯಲ್ಲಿ ಪರಿಗಣಿಸಲಾಗುವುದು.

| | |
|---|---|
| ಪ.ಜಾ / ಪ.ಪಂ.. ಪ್ರವರ್ಗ–1 : | ಸರ್ಕಾರದ ಅಧಿಸೂಚನೆ SWD.132.SAD97 ದಿ:8.2.2000 ಕ್ರಮವಾಗಿ ನಮೂನೆ–1 ಹಾಗೂ 2 |
| ಪ್ರವರ್ಗ2ಎ, 2ಬಿ,3ಎ, 3ಬಿ : | ಸರ್ಕಾರದ ಅಧಿಸೂಚನೆ SWD 126 BCA ದಿ: 13.12.2003 (ಕರ್ನಾಟಕ ಅನುಸೂಚಿತ ಜಾತಿಗಳು, ಅನುಸೂಚಿತ ಬುಡಕಟ್ಟುಗಳು ಮತ್ತು ಹಿಂದುಳಿದ ವರ್ಗಗಳ (ನೇಮಕಾತಿ ಮುಂತಾದ ಮೀಸಲಾತಿ ತಿದ್ದುಪಡಿ) ನಿಯಮಗಳು 2000ರನ್ವಯ ನಮೂನೆ–3 |

**ಮೀಸಲಾತಿ ಪ್ರಮಾಣ ಪತ್ರಗಳು ಚಾಲ್ತಿಯಲ್ಲಿರಬೇಕು.**

17. **ಮಾಜಿ ಸೈನಿಕರ ಕುಟುಂಬದ ಅಭ್ಯರ್ಥಿಗಳು:**

ಮಾಜಿ ಸೈನಿಕರು ಎನ್ನುವ ಬಗ್ಗೆ ಅಥವಾ ಭಾರತ ದೇಶದ ಒಕ್ಕೂಟದ ಸಶಸ್ತ್ರ ದಳದಲ್ಲಿ ಸೇವೆ ಸಲ್ಲಿಸುತ್ತಿರುವಾಗ ಕೊಲ್ಲಲ್ಪಟ್ಟ ಅಥವಾ ಶಾಶ್ವತವಾಗಿ ಅಂಗಹೀನರಾದ ವ್ಯಕ್ತಿಗಳ ಕುಟುಂಬದ ಸದಸ್ಯರು ಎಂಬ ಬಗ್ಗೆ ಸಕ್ಷಮ ಮಿಲಿಟರಿ ಅಧಿಕಾರಿಗಳಿಂದ ಪ್ರಮಾಣ ಪತ್ರವನ್ನು ಪಡೆದಿರಬೇಕು.

18. **ಅಂಗವಿಕಲ ಕುಟುಂಬದ ಅಭ್ಯರ್ಥಿಗಳು :**

ಅಂಗವಿಕಲ ಅಭ್ಯರ್ಥಿ ಎಂದರೆ, ಸರ್ಕಾರದ ಆದೇಶ ಸಂ.ಡಿಪಿಎಆರ್ 52 ಎಸ್‌ಆರ್‌ಆರ್ 99 ದಿ: 29.11.2002ರಂತೆ

(ಎ) ಕುಷ್ಠರೋಗ ನಿವಾರಿತರು

(ಬಿ) ಶ್ರವಣ ದೋಷ ಉಳ್ಳವರು ಅಂದರೆ 70 ಡೆಸಿಬಲ್ಸ್ ಮತ್ತು ಅದಕ್ಕಿಂತ ಹೆಚ್ಚು

(ಸಿ) ಮಾನಸಿಕ ಅಸ್ವಸ್ಥತೆಯಿಂದ ಗುಣಮುಖರಾಗಿರುವವರು

(ಡಿ) ಮೂಳೆಗಳು, ಮಾಂಸಖಂಡಗಳು ಮತ್ತು ಕೀಲುಗಳು ವಾಡಿಕೆಯ ಕಾರ್ಯನಿರ್ವಹಣೆಗೆ ಅಡಚಣೆಯಾಗುವಂತಹ ದೈಹಿಕ ದೋಷ ಅಥವಾ ವಿಕಲತೆ ಹೊಂದಿರುವ ವ್ಯಕ್ತಿಗಳು ಅರ್ಹರಾಗಿರುವುದಿಲ್ಲ.

(ಇ) ರಾಜ್ಯದ ಸರ್ಕಾರಿ ಜಿಲ್ಲಾ ಮತ್ತು ತಾಲ್ಲೂಕು ಆಸ್ಪತ್ರೆಗಳಲ್ಲಿರುವ ವೈದ್ಯರು ಅಂಗವಿಕಲರಿಗೆ ವೈದ್ಯಕೀಯ ಪ್ರಮಾಣ ಪತ್ರವನ್ನು ನೀಡಲು ಅಧಿಕಾರ ಹೊಂದಿದವರಾಗಿರುತ್ತಾರೆ.

ಸರ್ಕಾರದ ಆದೇಶ ಸಂ. ಡಿಪಿಎಆರ್ 07 ಸೇಸ್ಥೆಅ 94 ದಿನಾಂಕ: 13.9.95 ರಲ್ಲಿ ನಿಗಧಪಡಿಸಿರುವ ವೈದ್ಯಕೀಯ ಪ್ರಮಾಣ ಪತ್ರವನ್ನು ಸಕ್ಷಮ ವೈದ್ಯಾಧಿಕಾರಿಗಳಿಂದ ಪಡೆದಿರಬೇಕು. ಈ ಪ್ರಮಾಣ ಪತ್ರವನ್ನು ಅರ್ಜಿ ಸ್ವೀಕರಿಸಲು ನಿಗಧಿಪಡಿಸಿರುವ ಕಡೆಯ ದಿನಾಂಕದೊಳಗೆ ಅಭ್ಯರ್ಥಿಯು ಪಡೆದುಕೊಂಡಿರಬೇಕು.

**19. ಗ್ರಾಮೀಣ ಅಭ್ಯರ್ಥಿಗಳು :**

ಗ್ರಾಮೀಣ ಅಭ್ಯರ್ಥಿ ಎಂದರೆ, ಒಂದು ಹುದ್ದೆಗಾಗಿ ನಿಯಮಿಸಲಾದ ಅರ್ಹತಾ ಪರೀಕ್ಷೆಯು ಎಸ್.ಎಸ್.ಎಲ್.ಸಿ ಅಥವಾ ಉನ್ನತ ಪರೀಕ್ಷೆಯಾಗಿದ್ದಲ್ಲಿ 1ನೇ ತರಗತಿಯಿಂದ 10ನೇ ತರಗತಿಯವರೆಗೆ ವ್ಯಾಸಂಗದ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ಪ್ರಾಧಿಕಾರಿಯಿಂದ ದೃಢೀಕೃತ ಗ್ರಾಮೀಣ ಪತ್ರವನ್ನು ಲಗತ್ತಿಸತಕ್ಕದ್ದು. ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ ವ್ಯಾಸಂಗ ಮಾಡಿ ಉತ್ತೀರ್ಣರಾಗಿರುವವರು ಈ ಮೀಸಲಾತಿಯನ್ನು ಪಡೆಯಲು ಅರ್ಹರು. ಗ್ರಾಮೀಣ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳನ್ನು ಕ್ಲೇಮ್ ಮಾಡುವ ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳು ನಮೂನೆ–2ರ ಪ್ರಮಾಣ ಪತ್ರವಲ್ಲದೇ ಮೇಲುಸ್ಥರಕ್ಕೆ ಸೇರಿಲ್ಲದಿರುವ ಬಗ್ಗೆ ನಮೂನೆ–1ರಲ್ಲಿ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಸಂಬಂಧಿತ ತಹಶೀಲ್ದಾರ್‌ರವರಿಂದ ಪಡೆದು ಅದರ ಒಂದೊಂದು ಫೋಟೋ ಪ್ರತಿಗಳನ್ನು ಅರ್ಜಿಯೊಂದಿಗೆ ಲಗತ್ತಿಸತಕ್ಕದ್ದು. ಅಂತೆಯೇ ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1, ಪ್ರವರ್ಗ–2ಎ, 2 ಬಿ, 3ಎ, 3 ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು ಕಡ್ಡಾಯವಾಗಿ ಗ್ರಾಮೀಣ ಮೀಸಲಾತಿಯ ಪ್ರಮಾಣ ಪತ್ರವನ್ನು ನಮೂನೆ–2 ರಲ್ಲಿ ನಿಗಧಿತ ಪ್ರಾಧಿಕಾರಿಗಳಿಂದ ಪಡೆದು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಯವರಿಂದ ಮೇಲು ರುಜು ಮತ್ತು ಮೊಹರು ಮಾಡಿಸಿಕೊಂಡು ಅದರ ಒಂದು ಪ್ರತಿಯನ್ನು ಅರ್ಜಿಯೊಂದಿಗೆ ಲಗತ್ತಿಸತಕ್ಕದ್ದು.

21. **ಅರ್ಹತಾ ಷರತ್ತುಗಳು :**

ಅ) ಭಾರತೀಯ ನಾಗರೀಕನಾಗಿರತಕ್ಕದ್ದು.

ಆ) ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯ ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನ್ಯತೆಯಿಂದ ಮುಕ್ತರಾಗಿರಬೇಕು.

ಇ) ದೈಹಿಕವಾಗಿ ಅನರ್ಹರಾಗಿದ್ದಾರೆಂಬುದಾಗಿ ವೈದ್ಯಕೀಯ ಮಂಡಳಿಯ ವರದಿಯ ಮೇಲೆ ಅನರ್ಹ ರೆಂಬುದಾಗಿ ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ರಾಜ್ಯ ಸರ್ಕಾರವು ಕಾಯ್ದಿರಿಸಿಕೊಂಡಿದೆ ಮತ್ತು ಸರ್ಕಾರದ ವಿವೇಚನೆಯು ಯಾವುದೇ ವಿಧದಲ್ಲೂ ಈ ನಿಯಮಗಳ ಮೂಲಕ ಸೀಮಿತವಾಗಿರುವುದಿಲ್ಲ. ನಿಗಧಿತ ಶೈಕ್ಷಣಿಕ ಅರ್ಹತೆಯ ಜೊತೆಗೆ ಈ ಮೇಲ್ಕಂಡ ಅರ್ಹತೆಗಳನ್ನು ಅಭ್ಯರ್ಥಿಗಳು ನೇಮಕಾತಿಗಾಗಿ ಅರ್ಜಿ ಸಲ್ಲಿಸಲು ಅರ್ಹತೆಯನ್ನು ಹೊಂದಿರುತ್ತಾರೆ.

22. **ಕೆಳಕಂಡ ದಾಖಲೆಗಳನ್ನು ಅರ್ಜಿಯ ಜೊತೆಗೆ ಲಗತ್ತಿಸಿದೆಯೇ ಎಂದು ಖಚಿತಪಡಿಸಿಕೊಳ್ಳುವುದು.**

*. ಹುದ್ದೆಗಳಿಗೆ ನಿಗಧಿಪಡಿಸಲಾದ ವಿದ್ಯಾರ್ಹತೆಯ ಅಂಕಪಟ್ಟಿ / ಪ್ರಮಾಣ ಪತ್ರ ಮತ್ತು ಕಂಪ್ಯೂಟರ್ ಜ್ಞಾನದ ಬಗ್ಗೆ ದಾಖಲೆ

* ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣ ಪತ್ರ / ವರ್ಗಾವಣೆ ಪ್ರಮಾಣ ಪತ್ರ / ಜನ್ಮ ದಿನಾಂಕವನ್ನು ತೋರಿಸುವ ಸಂಚಿತ ದಾಖಲೆಯ ಉಧೃತ ಭಾಗ

* ಸೈನಿಕ ಸೇವೆಯಿಂದ ಬಿಡುಗಡೆಯಾದ / ಮುಕ್ತಿ ಹೊಂದಿದ ಬಗೆಗಿನ ಪ್ರಮಾಣ ಪತ್ರ (ಮಾಜಿ ಮೀಸಲಾತಿ ಕೋರಿದ್ದಲ್ಲಿ)

* ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ, ಪ್ರವರ್ಗ–1, ಪ್ರವರ್ಗ–2ಎ, ಪ್ರವರ್ಗ–2ಬಿ, ಪ್ರವರ್ಗ–3ಎ, ಪ್ರವರ್ಗ–3ಬಿ ಗಳ ಪ್ರಮಾಣ ಪತ್ರಗಳು (ಮೀಸಲಾತಿ ಕೋರಿದ್ದಲ್ಲಿ)

* ಗ್ರಾಮೀಣ ಮೀಸಲಾತಿ ಪ್ರಮಾಣಪತ್ರ ನಮೂನೆ–1 ರಲ್ಲಿ 2 ರಲ್ಲಿ (ಮೀಸಲಾತಿ ಕೋರಿದ್ದಲ್ಲಿ)

* ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)

* ಅಂಗವಿಕಲ ಮೀಸಲಾತಿ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)

* ಯೋಜನೆಗಳಿಂದ ನಿರಾಶ್ರಿತರಾದ ಬಗ್ಗೆ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)

* ವಿಧವೆಯಾದಲ್ಲಿ ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರ

**ಮೇಲ್ಕಂಡಂತೆ ನಿಗಧಿಪಡಿಸಿದ ದಾಖಲೆಗಳನ್ನು ಸಲ್ಲಿಸದಿದ್ದಲ್ಲಿ ಅರ್ಜಿಗಳನ್ನು ತಿರಸ್ಕರಿಸಲಾಗುವುದು.**

**24. ಇತರೆ ಸೂಚನೆಗಳು :**

1) ಅಭ್ಯರ್ಥಿಗಳು ತಮ್ಮ ಮಾಹಿತಿಗಾಗಿ ಭರ್ತಿ ಮಾಡಿ ಸಲ್ಲಿಸಿದ ಅರ್ಜಿಯ ಒಂದು ಫೋಟೋ ಪ್ರತಿಯನ್ನು ತಮ್ಮೊಂದಿಗೆ ಇಟ್ಟುಕೊಳ್ಳಲು ಸೂಚಿಸಿದೆ.

2) ಅರ್ಜಿಗಳನ್ನು ಸ್ವೀಕರಿಸಲು ನಿಗಧಿಪಡಿಸಿದ ಕೊನೆಯ ದಿನಾಂಕವು ಸಾರ್ವತ್ರಿಕ ರಜಾ ದಿನವಾಗಿ ಘೋಷಿಸಲ್ಪಟ್ಟರೆ ಅ ದಿನಾಂಕದ ಮಾರನೇಯ ದಿನವು ಅರ್ಜಿಗಳನ್ನು ಸ್ವೀಕರಿಸಲು ಕೊನೆಯ ದಿನಾಂಕವಾಗುವುದು.

3) **ಅಪೂರ್ಣ ಮಾಹಿತಿ ಇರುವ ಅರ್ಜಿಗಳನ್ನು ಯಾವುದೇ ಕಾರಣ ನೀಡದೇ ತಿರಸ್ಕರಿಸಲಾಗುವುದು.**

**ಎಸ್.ಎಸ್.ಪಟ್ಟಣಶೆಟ್ಟಿ,**
ಅಧ್ಯಕ್ಷರು, ಗ್ರಾಮ ಲೆಕ್ಕಿಗರ ನೇಮಕಾತಿ
ಆಯ್ಕೆ ಪ್ರಾಧಿಕಾರ ಮತ್ತು ಜಿಲ್ಲಾಧಿಕಾರಿಗಳು, ದಾವಣಗೆರೆ ಜಿಲ್ಲೆ.

## ದಾವಣಗೆರೆ ಜಿಲ್ಲೆ

### ಗ್ರಾಮ ಲೆಕ್ಕಿಗರ ನೇಮಕಾತಿಗೆ ಸಂಬಂಧಿಸಿದಂತೆ,

### ಕ್ಯಾಲೆಂಡರ್ ಆಫ್ ಇವೆಂಟ್ಸ್ (Calendar of Events)

| ಕ್ರ.ಸಂ. | ವಿವರ | ದಿನಾಂಕ |
|---|---|---|
| 1. | ಅರ್ಜಿ ಕರೆಯಲು ನಿಗಧಿಪಡಿಸಿದ ದಿನಾಂಕ | **17.11.2011** |
| 2. | ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | **16.12.2011** |
| 3. | ಜಿಲ್ಲಾಧಿಕಾರಿಗಳು ತಾತ್ಕಾಲಿಕ ಪರಿಶೀಲನಾ ಪಟ್ಟಿಯನ್ನು ಪ್ರಕಟಿಸಬೇಕಾದ ದಿನಾಂಕ | **16.1.2012** |
| 4. | ತಾತ್ಕಾಲಿಕ ಪರಿಶೀಲನಾ ಪಟ್ಟಿಯಂತೆ ಅಭ್ಯರ್ಥಿಗಳು ಮೂಲ ದಾಖಲೆಗಳೊಂದಿಗೆ ಪರಿಶೀಲನೆಗೆ ಜಿಲ್ಲಾಧಿಕಾರಿಗಳ ಕಚೇರಿಗೆ ಹಾಜರಾಗಬೇಕಾದ ದಿನಾಂಕ ಮತ್ತು ಸಮಯ | **23.1.2012** |
| 5. | ಜಿಲ್ಲಾಧಿಕಾರಿ ಕಚೇರಿ ಅಂತಿಮ ಆಯ್ಕೆ ಪಟ್ಟಿಯನ್ನು ಪ್ರಕಟಿಸಬೇಕಾದ ದಿನಾಂಕ | **30.1.2012** |
| 6. | ವೆಬ್‌ಸೈಟ್ ವಿಳಾಸ | **http://davanagere.nic.in** |
| 7. | ಸ್ಪಷ್ಟೀಕರಣ / ಮಾಹಿತಿಗಾಗಿ ಸಂಪರ್ಕಿಸಬಹುದಾದ ಹೆಲ್ಪ್ ಲೈನ್ | **08192–255118** |

**ಎಸ್.ಎಸ್.ಪಟ್ಟಣಶೆಟ್ಟಿ,**
ಅಧ್ಯಕ್ಷರು, ಗ್ರಾಮ ಲೆಕ್ಕಿಗರ ನೇಮಕಾತಿ
ಆಯ್ಕೆ ಪ್ರಾಧಿಕಾರ ಮತ್ತು ಜಿಲ್ಲಾಧಿಕಾರಿಗಳು, ದಾವಣಗೆರೆ ಜಿಲ್ಲೆ.

## ಜಿಲ್ಲಾಧಿಕಾರಿಗಳ ಕಾರ್ಯಾಲಯ, ದಾವಣಗೆರೆ ಜಿಲ್ಲೆ
## ಗ್ರಾಮ ಲೆಕ್ಕಿಗರ ನೇರ ನೇಮಕಾತಿಗಾಗಿ ಅರ್ಜಿ ನಮೂನೆ

ಪಾಸ್‌ಪೋರ್ಟ್ ಸೈಜ್‌ನ ಫೋಟೋ ಅಂಟಿಸಿರಿ

**ಅಧ್ಯಕ್ಷರು, ಆಯ್ಕೆ ಮತ್ತು ನೇಮಕಾತಿ ಪ್ರಾಧಿಕಾರ**
**ಹಾಗೂ ಜಿಲ್ಲಾಧಿಕಾರಿಗಳು,**
ರೈತ ಭವನ, ಪಿ.ಬಿ. ರಸ್ತೆ,
ಕೆಎಸ್‌ಆರ್‌ಟಿಸಿ ಎದುರು,
ದಾವಣಗೆರೆ ಜಿಲ್ಲೆ.

ಪ್ರಕಟಣೆ ಸಂಖ್ಯೆ :
ಜಾಹೀರಾತು ಹೊರಡಿಸಿದ ದಿನಾಂಕ:
ಅರ್ಜಿ ಸಲ್ಲಿಸುತ್ತಿರುವ ಹುದ್ದೆಯ ಹೆಸರು :

| ಡಿ.ಡಿ. ಪಡೆದ ಬ್ಯಾಂಕ್ ಹೆಸರು | ಸಂದಾಯ ಮಾಡಿದ ಮೊತ್ತ | ಡಿ.ಡಿ. ಸಂಖ್ಯೆ ಮತ್ತು ದಿನಾಂಕ |
|---|---|---|
| | | |

| | | | | |
|---|---|---|---|---|
| 1 | ಅರ್ಜಿದಾರನ/ಳ ಪೂರ್ಣ ಹೆಸರು | | | |
| 2 | ತಂದೆ / ಪೋಷಕರ ಹೆಸರು | | | |
| 3 | ಖಾಯಂ ವಿಳಾಸ | | | |
| 4 | ಅಂಚೆ ವಿಳಾಸ | | | |
| 5 | ಸಂಪರ್ಕಿಸಬಹುದಾದ ದೂರವಾಣಿ ಸಂಖ್ಯೆ | | | |
| 6 | ಲಿಂಗ : ಪುರುಷ / ಮಹಿಳೆ | | | |
| 7 | ಜನ್ಮ ದಿನಾಂಕ(ಎಸ್.ಎಸ್.ಎಲ್.ಸಿ. ಅಂಕ ಪಟ್ಟಿಯಲ್ಲಿರುವಂತೆ) | | | |
| 8 | ಮೀಸಲಾತಿ ಕೋರಿದ್ದಲ್ಲಿ ಅನ್ವಯಿಸುವ ಬಾಕ್ಸ್‌ನಲ್ಲಿ ☑ ಗುರುತು ಹಾಕಿ (ದೃಢೀಕರಣ ಪತ್ರಗಳನ್ನು ಕಡ್ಡಾಯವಾಗಿ ಲಗತ್ತಿಸಬೇಕು) | | | |
| | ಅ. ಪ.ಜಾ / ಪ.ಪಂ.ದವರೇ | | | |
| | | ಪ.ಜಾತಿ | ಪ.ಪಂಗಡ | ಉಪಜಾತಿ ನಮೂದಿಸಬೇಕು |

| | | | | | | | |
|---|---|---|---|---|---|---|---|
| | ಆ. ಹಿಂದುಳಿದ ವರ್ಗದವರೇ | | | | | | |
| | | ಪ್ರ–1 | 2ಎ | 2ಬಿ | 3ಎ | 3ಬಿ | ಉಪಜಾತಿ ನಮೂದಿಸಬೇಕು |

| | | | | |
|---|---|---|---|---|
| | ಇ.ಸಾಮಾನ್ಯ ವರ್ಗದವರೇ | | | |
| | | ಹೌದು | ಇಲ್ಲ | |

| | | | | |
|---|---|---|---|---|
| | ಈ. ಇತರೆ ಮೀಸಲಾತಿ | | | |
| | | ಗ್ರಾಮೀಣ | ಅಂ.ವಿ. | ಮಾ.ಸೈ. |

| | | | | |
|---|---|---|---|---|
| 9 | ವಿದ್ಯಾರ್ಹತೆ | **ಪಿ.ಯು.ಸಿ. ಅಥವಾ 12ನೇ ತರಗತಿ((ಸಿ.ಬಿ.ಎಸ್.ಸಿ/ಐಸಿಎಸ್‌ಸಿ)** | | |
| | | **ಒಟ್ಟು ಅಂಕಗಳು** | **ಗಳಿಸಿದ ಅಂಕಗಳು** | **ಶೇಕಡ** |
| | | | | |
| 10 | ಕಂಪ್ಯೂಟರ್ ಜ್ಞಾನದ ಬಗ್ಗೆ ಮಾಹಿತಿ (ಎಂ.ಎಸ್.ವರ್ಡ್, ಎಂ.ಎಸ್.ಎಕ್ಸೆಲ್, ಪವರ್ ಪಾಯಿಂಟ್, ಸ್ಕ್ಯಾನಿಂಗ್, ನುಡಿ ಕನ್ನಡ ತಂತ್ರಾಂಶಬಳಸುವ ಬಗ್ಗೆ ಸಾಮರ್ಥ್ಯದ ವಿವರ) | | | |

ಈ ಮೇಲ್ಕಂಡ ಎಲ್ಲಾ ವಿವರಗಳು ಸತ್ಯವೆಂದು ಪ್ರಮಾಣೀಕರಿಸುತ್ತೇನೆ. ಸತ್ಯವಲ್ಲವೆಂದು ತಿಳಿದುಬಂದಲ್ಲಿ ನನ್ನ ಅರ್ಜಿಯನ್ನು ತಿರಸ್ಕರಿಸಬಹುದು. ನನ್ನ ವಿರುದ್ಧ ಸಿವಿಲ್/ಕ್ರಿಮಿನಲ್ ಮೊಕದ್ದಮೆ ಹೂಡಬಹುದು.

ಸ್ಥಳ:

ದಿನಾಂಕ: **ಅರ್ಜಿದಾರನ/ಳ ಸಹಿ**

ಪಿ.ಆರ್. 338

## f¯Á ªÄvÄ ¸vï £ÁåAiÀiÁ¢üÃ±gªg PbÃj, ZÁªÄgÁd£Ug

### C¢¸ÆZ£ ¸ASÉ. JrJªiïJ£ï / 2633 /2011, ¢£ÁAPB 15.11.2011

**«µAiÄ B** ಚಾಮರಾಜನಗರ ಜಿಲ್ಲಾ ನ್ಯಾಯಾಂಗ ಘಟಕದಲ್ಲಿ ಖಾಲಿ ಇರುವ ಶೀಘ್ರಲಿಪಿಗಾರ, ನಕಲು-ಬೆರಳಚ್ಚುಗಾರ ಮತ್ತು ಸೇವಕ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಬಗ್ಗೆ.

**G¯ÃR B** **1.** ಗೌರವಾನ್ವಿತ ಕರ್ನಾಟಕ ಉಚ್ಚ ನ್ಯಾಯಾಲಯದ ಅನುಮತಿ ಪತ್ರ ಸಂಖ್ಯೆಃ No.LCA-II.36/2003 ದಿನಾಂಕ 23.06.2011 ಮತ್ತು 24.10.2011.

2. ಗೌರವಾನ್ವಿತ ಕರ್ನಾಟಕ ಉಚ್ಚ ನ್ಯಾಯಾಲಯದ ಅನುಮತಿ ಪತ್ರ ಸಂಖ್ಯೆಃ No.LCA-II.54/2011 ದಿನಾಂಕ 01.10.2011 ರ ಜೊತೆ ಲಗತ್ತಿಸಿರುವ ಸರ್ಕಾರದ ಆದೇಶ ಸಂಖ್ಯೆಃ LAW 186 LAC 2011, ದಿ.21.09.2011.

ಮೇಲ್ಕಂಡ ಅಧಿಸೂಚನೆ ಅನ್ವಯ ಚಾಮರಾಜನಗರದ ಜಿಲ್ಲಾ ನ್ಯಾಯಾಂಗ ಘಟಕದ ಅಧೀನ ನ್ಯಾಯಾಲಯಗಳಲ್ಲಿ ಖಾಲಿ ಇರುವ ಶೀಘ್ರಲಿಪಿಗಾರರು 5 ಹುದ್ದೆಗಳು, ಬೆರಳಚ್ಚು-ನಕಲುಗಾರರು 3 ಹುದ್ದೆಗಳು ಮತ್ತು ಜವಾನರ / 3 ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ. ನಿಗದಿಪಡಿಸಿದ ಅರ್ಜಿ ನಮೂನೆಯ ಬೆರಳಚ್ಚು ಪ್ರತಿ / ಗಣಕೀಕೃತ ಪ್ರತಿಯಲ್ಲಿಯೇ ಅಭ್ಯರ್ಥಿಗಳು ತಮ್ಮ ಸ್ವಂತ ಕೈಬರಹದಿಂದ ಎಲ್ಲಾ ಅಂಕಣಗಳನ್ನು ಜಾಗರೂಕತೆಯಿಂದ ಭರ್ತಿ ಮಾಡಿ ದಿನಾಂಕಃ 19.12.2011 ರಂದು ಸಂಜೆ 5 ಘಂಟೆಯೊಳಗೆ ಈ ಕಛೇರಿಗೆ ಸಲ್ಲಿಸತಕ್ಕದ್ದು.

ಅರ್ಜಿಗಳನ್ನು ಸ್ವೀಕರಿಸಲು ಕೊನೆಯ ದಿನಾಂಕಃ 19.12.2011ರ ಸಂಜೆ 5.00 ಘಂಟೆ

**Cfð ¸°¸¨ÃPÁz «¼Á¸ B** ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಚಾಮರಾಜನಗರ.

(1) **ºÄzAiÄ ¥z£ÁªÄ B ²ÃWæ°¦UÁg**

ಖಾಲಿ ಹುದ್ದೆಗಳ ಸಂಖ್ಯೆ ಃ 05

ವೇತನ ಶ್ರೇಣಿ ಃ 7275-175-7800-200-8600-225-9500-250-10500-300-12300-350-13350.

| ವರ್ಗೀಕರಣ | ಇತರೆ | ಮಹಿಳೆ | ಅಂಗವಿಕಲ | ಒಟ್ಟು |
|---|---|---|---|---|
| ಪರಿಶಿಷ್ಟ ಜಾತಿ | - | 1 | - | 1 |
| ಪರಿಶಿಷ್ಟ ಪಂಗಡ | 1 ( ಬ್ಯಾಕ್‌ಲಾಗ್) | - | - | 1 |
| ಪ್ರವರ್ಗ - II (ಎ) | 1 | - | - | 1 |
| ಸಾಮಾನ್ಯ ವರ್ಗ | - | 1 | 1* | 2 |
| ಒಟ್ಟು | 2 | 2 | 1 | 5 |

* ಚಲನವಲನ ವೈಕಲ್ಯವುಳ್ಳ ಅಂಗವಿಕಲ ಅಭ್ಯರ್ಥಿಗಳು

**±ÊPëtP «zÁåºðvÉ**

೧. ಎಸ್‌ಎಸ್‌ಎಲ್‌ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರತಕ್ಕದ್ದು.

೨. ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ ವತಿಯಿಂದ ನಡೆಸುವ ಹಿರಿಯ ದರ್ಜೆ (senior grade|) ಕನ್ನಡ ಮತ್ತು ಆಂಗ್ಲ ಭಾಷೆಗಳ ಬೆರಳಚ್ಚು ವಿಷಯಗಳಲ್ಲಿ ತೇರ್ಗಡೆ ಹೊಂದಿರಬೇಕು ಅಥವಾ ತತ್ಸಮಾನ ವಿದ್ಯಾರ್ಹತೆ.

೩. ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ ವತಿಯಿಂದ ನಡೆಸುವ ಹಿರಿಯ ದರ್ಜೆ (senior grade|) ಕನ್ನಡ ಮತ್ತು ಆಂಗ್ಲ ಭಾಷೆಗಳ ಶೀಘ್ರಲಿಪಿ ವಿಷಯಗಳಲ್ಲಿ ತೇರ್ಗಡೆ ಹೊಂದಿರಬೇಕು ಅಥವಾ ತತ್ಸಮಾನ ವಿದ್ಯಾರ್ಹತೆ.

**DAiÄÌ «zÁ£À B**

ನಿಗದಿತ ಶೈಕ್ಷಣಿಕ ಅರ್ಹತಾ ಪರೀಕ್ಷೆಗಳಲ್ಲಿ ಗಳಿಸಿರುವ ಒಟ್ಟು ಶೇಕಡಾವಾರು ಅಂಕಗಳು ಮತ್ತು ನಿಮಿಷ ಒಂದಕ್ಕೆ 120 ಪದಗಳ ದರದಲ್ಲಿ 5 ನಿಮಿಷಗಳ ಉಕ್ತಲೇಖನವನ್ನು ತೆಗೆದುಕೊಂಡು, ಉಕ್ತಲೇಖನವನ್ನು 45 ನಿಮಿಷಗಳಲ್ಲಿ ಅನುಲಿಪಿ ಮಾಡುವ ಅರ್ಹತಾ ಪರೀಕ್ಷೆಯಲ್ಲಿ ಗಳಿಸುವ ಅಂಕಗಳು ಮತ್ತು ಸಂದರ್ಶನದಲ್ಲಿ ಗಳಿಸುವ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.

ಟಿಪ್ಪಣಿಃ ಅರ್ಹತಾ ಪರೀಕ್ಷೆಯು ಗರಿಷ್ಠ 100 ಅಂಕಗಳನ್ನು ಒಳಗೊಂಡಿದ್ದು, ಅದರಲ್ಲಿ ತೇರ್ಗಡೆಯಾಗಲು ಕನಿಷ್ಠ 50 ಅಂಕಗಳನ್ನು ಪಡೆಯಬೇಕು ಮತ್ತು ಸಂದರ್ಶನವು 05 ಅಂಕಗಳನ್ನೊಳಗೊಂಡಿರುತ್ತದೆ.

**(2) ºÄzÉÝAiÄ ¥z£Áª Ä B** ಬೆರಳಚ್ಚು-ನಕಲುಗಾರರು

ಖಾಲಿ ಹುದ್ದೆಗಳ ಸಂಖ್ಯೆ ಃ **03**

**ªÃv£À ±ÃætÂ B** 5800-100-6000-125-6500-150-7100-175-7800-200- 8600-225 -9500-250-10500.

| ªVðÃPgtÀ | EvgÀ | UÁæ«ÄÃtÀ | ªÄ»¼É | MlÄÖ |
|---|---|---|---|---|
| ¥jÀ²µÀÖ eÁw | - | 1 | - | 1 |
| ¸ÁªÀiÁ£Àå ªUÀð | - | - | 1 | 1 |
| ¥ÀæªUÀð- III (J) | 1 | - | - | 1 |
| MlÄÖ | 1 | 1 | 1 | 3 |

**±ÊPëtP «zÁåºðvÉ**

೧. ಎಸ್‌ಎಸ್‌ಎಲ್‌ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರತಕ್ಕದ್ದು.

೨. ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿಯು ನಡೆಸುವ ಕಿರಿಯ ದರ್ಜೆಯ ( Junior Grade) ಕನ್ನಡ ಮತ್ತು ಆಂಗ್ಲ ಭಾಷೆಗಳ ಬೆರಳಚ್ಚು ಪರೀಕ್ಷೆಗಳಲ್ಲಿ ತೇರ್ಗಡೆ ಹೊಂದಿರಬೇಕು ಅಥವಾ ತತ್ಸಮಾನ ವಿದ್ಯಾರ್ಹತೆ.

**DAiÄÌAiÄ «zÁ£À B**

ನಿಗದಿತ ಶೈಕ್ಷಣಿಕ ಅರ್ಹತಾ ಪರೀಕ್ಷೆಗಳಲ್ಲಿ ಗಳಿಸಿರುವ ಒಟ್ಟು ಶೇಕಡಾವಾರು ಅಂಕಗಳು ಮತ್ತು 15 ನಿಮಿಷಗಳ ಉಕ್ತಲೇಖನದಲ್ಲಿ ಕೊಡುವ ವಿಷಯವನ್ನು ಬೆರಳಚ್ಚು ಮಾಡುವ ಅರ್ಹತಾ ಪರೀಕ್ಷೆಯಲ್ಲಿ ಗಳಿಸುವ ಅಂಕಗಳು ಮತ್ತು ಸಂದರ್ಶನದಲ್ಲಿ ಗಳಿಸುವ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.

ಟಿಪ್ಪಣಿ : ಅರ್ಹತಾ ಪರೀಕ್ಷೆಯು ಗರಿಷ್ಠ 100 ಅಂಕಗಳನ್ನು ಒಳಗೊಂಡಿದ್ದು, ಅದರಲ್ಲಿ ತೇರ್ಗಡೆಯಾಗಲು ಕನಿಷ್ಠ 50 ಅಂಕಗಳನ್ನು ಪಡೆಯಬೇಕು ಮತ್ತು ಸಂದರ್ಶನವು 05 ಅಂಕಗಳನ್ನೊಳಗೊಂಡಿರುತ್ತದೆ.

**(3) ºÄzÉÝAiÄ ¥zÀ £ÁªÀÄ B ¸ÃªÀPgÄ**
**SÁ° ºÄzÉÝU¼À ¸ASÉå B 03**
**ªÃv£À ±ÉæÃt B** 4800-100-6000-125-6500-150-7100-175-7275
(ಸೇವಕರ ಹುದ್ದೆ)

| ವರ್ಗೀಕರಣ | ಮಹಿಳೆ | ಅಂಗವಿಕಲ | ಒಟ್ಟು |
|---|---|---|---|
| ಪರಿಶಿಷ್ಟ ಜಾತಿ | - | 1* | 1 |
| ಸಾಮಾನ್ಯ ವರ್ಗ | 1 | - | 1 |
| ಪ್ರವರ್ಗ – II (J) | - | 1* | 1 |
| ಒಟ್ಟು | 1 | 2 | 3 |

* ದೃಷ್ಟಿಮಾಂದ್ಯ ಅಂಗವಿಕಲ ಅಭ್ಯರ್ಥಿಗಳು

**±ÊPëtP «zÁåºðvÉ**

1) 7ನೇ ತರಗತಿ ಪರೀಕ್ಷೆಯಲ್ಲಿ ಉತ್ತೀರ್ಣತೆ.

2) ಕನ್ನಡ ಓದಲು ಮತ್ತು ಬರೆಯಲು ತಿಳಿದಿರಬೇಕು.

**DAiÄÌAiÄ «zÁ£À B** ನಿಗದಿತ ಶೈಕ್ಷಣಿಕ ಅರ್ಹತಾ ಪರೀಕ್ಷೆಯಲ್ಲಿ ಗಳಿಸಿರುವ ಒಟ್ಟು ಶೇಕಡಾವಾರು ಅಂಕಗಳ ಆಧಾರದ ಮೇಲೆ 01 ಹುದ್ದೆಗೆ 10 ಅಭ್ಯರ್ಥಿಗಳಂತೆ ಅತಿ ಹೆಚ್ಚು ಅಂಕ ಪಡೆದ ಅಭ್ಯರ್ಥಿಗಳನ್ನು ಪ್ರಕಟಿಸಿರುವ ಹುದ್ದೆಗಳಿಗೆ ಅನುಗುಣವಾಗಿ ಸಂದರ್ಶನಕ್ಕೆ ಕರೆಯಲಾಗುವುದು. ಸಂದರ್ಶನದಲ್ಲಿ ಗಳಿಸಿದ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.

ಸಂದರ್ಶನವು 10 ಅಂಕಗಳನ್ನೊಳಗೊಂಡಿರುತ್ತದೆ.

ಮೇಲ್ಕಂಡ ಹುದ್ದೆಗಳನ್ನು ಕರ್ನಾಟಕ ಅಧೀನ ನ್ಯಾಯಾಲಯಗಳು (ಲಿಪಿಕ ಮತ್ತು ಇತರೆ ಹುದ್ದೆಗಳು) (ನೇಮಕಾತಿ) (ತಿದ್ದುಪಡಿ) ನಿಯಮಗಳು 2007ರ ಅನ್ವಯ ನೇರನೇಮಕಾತಿಯ ಮೂಲಕ ಆಯ್ಕೆ ಮಾಡಲಾಗುವುದು ಹಾಗೂ ಕಾಲಕಾಲಕ್ಕೆ ಚಾಲ್ತಿಯಲ್ಲಿರುವ ನಿಯಮಾನುಸಾರ ಆಯ್ಕೆ ಮಾಡಲಾಗುವುದು.

ನಿರ್ದಿಷ್ಟಪಡಿಸಿದ ಅಂಗವಿಕಲ ಅಭ್ಯರ್ಥಿಗಳು ಲಭ್ಯವಾಗದಿದ್ದಲ್ಲಿ , ನಿಯಮದಂತೆ ಬೇರೆ ಅಂಗವಿಕಲತೆ ಇರುವವರನ್ನು ಆಯ್ಕೆಗೆ ಪರಿಗಣಿಸಲಾಗುವುದು.

ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳಲ್ಲಿ, ಮಹಿಳಾ ಅಭ್ಯರ್ಥಿಗಳು, ಅಂಗವಿಕಲ ಅಭ್ಯರ್ಥಿಗಳು ಹಾಗೂ ಗ್ರಾಮೀಣ ಅಭ್ಯರ್ಥಿಗಳ ಮೀಸಲಾತಿಗಳಿಗೆ ಅರ್ಹ ಅಭ್ಯರ್ಥಿಗಳು ಲಭ್ಯವಿರದೇ ಇದ್ದ ಪಕ್ಷದಲ್ಲಿ, ಆ ಹುದ್ದೆಗಳನ್ನು ಆಯಾ ಪಂಗಡಗಳ ಇತರೆ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು. ಆಯಾ ಪಂಗಡಗಳ ಇತರೆ ಅಭ್ಯರ್ಥಿಗಳೂ ಸಹ ಲಭ್ಯವಾಗದಿದ್ದಲ್ಲಿ , ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳಿಗೆ ಮೀಸಲಾದ ಹುದ್ದೆಗಳನ್ನು ಹೊರತುಪಡಿಸಿ ಇನ್ನುಳಿದ ಹಿಂದುಳಿದ ವರ್ಗಗಳ ಹುದ್ದೆಗಳನ್ನು ಸಾಮಾನ್ಯ ವರ್ಗದ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು.

ಪರಿವೀಕ್ಷಣಾ ಅವಧಿ ಃ ಆಯ್ಕೆಯಾದ ಅಭ್ಯರ್ಥಿಗಳನ್ನು ನೇಮಕಾತಿ ನಿಯಮಗಳಂತೆ 2 ವರ್ಷಗಳ ಕಾಲ ಪರಿವೀಕ್ಷಣಾ ಅವಧಿಯಲ್ಲಿಡಲಾಗುವುದು. ಈ ಅವಧಿಯಲ್ಲಿ ಅಭ್ಯರ್ಥಿಗಳು ಅವರುಗಳ ಹುದ್ದೆಗೆ ನಿಗದಿಪಡಿಸಿರುವ ಇಲಾಖಾ ಪರೀಕ್ಷೆಗಳಲ್ಲಿ ಮತ್ತು ಕನ್ನಡ ಭಾಷಾ ಪರೀಕ್ಷೆಯಲ್ಲಿ ಉತ್ತೀರ್ಣರಾಗಬೇಕು.

**ªAiÆÃ«Äw B**

1) ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಯು ಕನಿಷ್ಟ 18 ವರ್ಷ ವಯಸ್ಸನ್ನು ಪೂರೈಸಿರತಕ್ಕದ್ದು ಮತ್ತು ಗರಿಷ್ಠ ವಯಸ್ಸನ್ನು ಮೀರಿರಕೂಡದು.

2) ಗರಿಷ್ಟ ವಯೋಮಿತಿ ಃ

| | |
|---|---|
| ಸಾಮಾನ್ಯ ವರ್ಗ | 35 ವರ್ಷ ಮೀರಿರಬಾರದು |
| ಪ್ರವರ್ಗ 2ಎ, 2ಬಿ, 2ಎ, 3ಬಿ | 38 ವರ್ಷ ಮೀರಿರಬಾರದು |
| ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ / ಪ್ರವರ್ಗ – 1 | 40 ವರ್ಷ ಮೀರಿರಬಾರದು |

1. ಸರ್ಕಾರಿ ಸೇವೆಯಲ್ಲಿರುವವರಿಗೆ, ವಿಧವೆಯರಿಗೆ, ಮಾಜಿ ಸೈನಿಕರಿಗೆ ಹಾಗೂ ಅಂಗವಿಕಲರಿಗೆ ನಿಯಮಾನುಸಾರ ವಯೋಮಿತಿಯಲ್ಲಿ ಸಡಿಲಿಕೆ ನೀಡಲಾಗುವುದು (ಈ ಬಗ್ಗೆ ಮೀಸಲಾತಿ ಕೋರಿದಲ್ಲಿ ಪ್ರಮಾಣಪತ್ರ ಸಲ್ಲಿಸಬೇಕು).
2. ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣ ಪತ್ರ / ವರ್ಗಾವಣೆ ಪ್ರಮಾಣ ಪತ್ರ / ಜನನ ದಿನಾಂಕವನ್ನು ತೋರಿಸುವ ಸಂಚಿತ ದಾಖಲೆಯ ಉದ್ಧೃತ ಭಾಗದ ಪ್ರತಿ ಸಲ್ಲಿಸಬೇಕು.
3. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಪ್ರವರ್ಗ -1, 2ಎ, 2ಬಿ, 3ಎ, 3ಬಿ, ಗಳ ಮೀಸಲಾತಿ ಪ್ರಮಾಣಪತ್ರಗಳನ್ನು ಪ್ರಸ್ತುತ ಚಾಲ್ತಿಯಲ್ಲಿರುವ ನಮೂನೆಗಳಲ್ಲಿ ಸಲ್ಲಿಸಬೇಕು. (ಮೀಸಲಾತಿ ಕೋರಿದಲ್ಲಿ)
4. ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ನಿಗದಿತ ನಮೂನೆ-2 ರಲ್ಲಿ ಅಧಿಕೃತ ಅಧಿಕಾರಿಗಳಿಂದ ಪಡೆದು ಅದನ್ನು ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ಸಹಿ ಮಾಡಿಸಿ ಸಲ್ಲಿಸಬೇಕು. ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳ ಮೀಸಲಾತಿ ಪ್ರಮಾಣ ಪತ್ರಗಳು ತಿರಸ್ಕೃತಗೊಂಡಲ್ಲಿ ಅವರು ಗ್ರಾಮೀಣ ಮೀಸಲಾತಿಗೂ ಅನರ್ಹರಾಗುತ್ತಾರೆ.
5. ಗ್ರಾಮೀಣ ಮೀಸಲಾತಿಯನ್ನು ಕೋರುವ ಸಾಮಾನ್ಯ ವರ್ಗದ ಅಭ್ಯರ್ಥಿಗಳು ಪ್ರಮಾಣ ಪತ್ರ ನಮೂನೆ-2ರ ಜೊತೆ ನಮೂನೆ –1ರಲ್ಲೂ ದೃಢೀಕೃತ ಪತ್ರವನ್ನು ಸಲ್ಲಿಸುವುದು.
6. ಶಾಲಾ / ಕಾಲೇಜಿನ ಮುಖ್ಯೋಪಾಧ್ಯಾಯರು / ಪ್ರಾಂಶುಪಾಲರಿಂದ ಪಡೆದ ಒಂದು ನಡತೆ ಪ್ರಮಾಣ ಪತ್ರ ಹಾಗೂ ಸ್ಥಳೀಯ ಇಬ್ಬರು ಗಣ್ಯ ವ್ಯಕ್ತಿಗಳಿಂದ ಪಡೆದ 6 ತಿಂಗಳ ಇತ್ತೀಚಿನ ಎರಡು ನಡತೆ ಪ್ರಮಾಣ ಪತ್ರಗಳ ಪ್ರತಿ ಸಲ್ಲಿಸಬೇಕು.
7. ಅಂಗವಿಕಲ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ವೈದ್ಯಕೀಯ ಪ್ರಮಾಣ ಪತ್ರವನ್ನು ನಿಗದಿಪಡಿಸಿದ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ವೈದ್ಯಕೀಯ ಮಂಡಳಿಯಿಂದ ಪ್ರಮಾಣ ಪತ್ರವನ್ನು ಪಡೆದು ಸಲ್ಲಿಸಬೇಕು.
8. SC/ST/Cat-I ಅಭ್ಯರ್ಥಿಗಳು ರೂ. 25/- ಹಾಗೂ ಇತರೆ ವರ್ಗಕ್ಕೆ ಸೇರಿದ ಅಭ್ಯರ್ಥಿಗಳು ರೂ. 50/- ಅನ್ನು ಅರ್ಜಿ ಪ್ರೊಸಸಿಂಗ್ ಶುಲ್ಕವಾಗಿ ಸಲ್ಲಿಸಬೇಕಾಗಿದ್ದು , ಇದನ್ನು ಭಾರತೀಯ ಅಂಚೆ ಆದೇಶ (I.P.O.) ಮೂಲಕ “ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಚಾಮರಾಜನಗರ”, ಇವರಿಗೆ ಸಂದಾಯವಾಗುವಂತೆ ಪಡೆದು ಅರ್ಜಿ ಜೊತೆ ಲಗತ್ತಿಸಬೇಕು. ಮೇಲೆ ಹೇಳಲಾದ ಅಂಚೆ ಆದೇಶವನ್ನು ಈ ಅಧಿಸೂಚನೆ ಪ್ರಕಟವಾದ ದಿನಾಂಕದ ನಂತರ ಪಡೆದುದ್ದಾಗಿರಬೇಕು. ಮೇಲ್ಕಂಡಂತೆ I.P.O. ಅನ್ನು ಲಗತ್ತಿಸದ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

**C¨|yðU½U ¸ÆZ£ B**

1. ಅಭ್ಯರ್ಥಿಯು ಈ ಅಧಿಸೂಚನೆಯಲ್ಲಿ ಲಗತ್ತಿಸಿದ ನಿಗದಿತ ಅರ್ಜಿ ನಮೂನೆಯಲ್ಲಿ ಬೆರಳಚ್ಚು ಮಾಡಿಸಿದ ಅಥವಾ ಗಣಕೀಕೃತ ಅರ್ಜಿಯನ್ನು ತನ್ನ ಕೈ ಬರವಣಿಗೆಯಲ್ಲಿ ಭರ್ತಿ ಮಾಡಿ ಸಲ್ಲಿಸತಕ್ಕದ್ದು. ಸರಿಯಾಗಿ ಅಂಕಣಗಳನ್ನು ಭರ್ತಿಮಾಡದೇ ಇರುವ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

2. ಒಂದಕ್ಕಿಂತ ಹೆಚ್ಚು ಹುದ್ದೆಗಳಿಗೆ ಅರ್ಜಿ ಹಾಕಲು ಬಯಸುವವರು ಆಯಾ ಹುದ್ದೆಗಳಿಗೆ ಪ್ರತ್ಯೇಕವಾಗಿ ನಿಗದಿತ ಅರ್ಜಿ ನಮೂನೆಗಳಲ್ಲಿ ಅರ್ಜಿ ಸಲ್ಲಿಸತಕ್ಕದ್ದು.

3. ಅಭ್ಯರ್ಥಿಯು ಇತ್ತೀಚಿನ ಪಾಸ್‌ಪೋರ್ಟ್ ಸೈಜ್ ಪೋಟೋವನ್ನು ಅರ್ಜಿ ನಮೂನೆಯಲ್ಲಿ ತೋರಿಸಿರುವ ಜಾಗದಲ್ಲಿ ಅಂಟಿಸಿ ಅದರ ಮೇಲೆ ಸಹಿ ಮಾಡತಕ್ಕದ್ದು.

4. ಅರ್ಜಿ ನಮೂನೆಯೊಂದಿಗೆ ಸಲ್ಲಿಸಬೇಕಾಗಿರುವ ಶೈಕ್ಷಣಿಕ ವಿದ್ಯಾರ್ಹತೆಯ ಅಂಕಪಟ್ಟಿಗಳನ್ನು ಹಾಗೂ ಇತರೆ ಪ್ರಮಾಣ ಪತ್ರಗಳನ್ನು ಸ್ವಯಂ ದೃಢೀಕರಿಸತಕ್ಕದ್ದು. ಅರ್ಜಿಯೊಂದಿಗೆ ಮೂಲ ಪ್ರತಿಗಳನ್ನು ಲಗತ್ತಿಸುವ ಅವಶ್ಯಕತೆ ಇರುವುದಿಲ್ಲ. ಲಗತ್ತಿಸಿದ ಪ್ರಮಾಣ ಪತ್ರಗಳು ಅರ್ಜಿ ಸಲ್ಲಿಸುವ ದಿನಾಂಕದ ಒಳಗೆ ಪಡೆದಿರಬೇಕು.

5. ಅಭ್ಯರ್ಥಿಗಳು ಅರ್ಜಿಯೊಂದಿಗೆ ತಮ್ಮ ನಡತೆ ಮತ್ತು ಶೀಲದ ಬಗ್ಗೆ ತಮ್ಮ ಸಂಬಂಧಿಯಲ್ಲದ ಸಮಾಜದ ಇಬ್ಬರು ಗಣ್ಯ ವ್ಯಕ್ತಿಗಳಿಂದ ಪಡೆದ ಎರಡು ಪ್ರಮಾಣ ಪತ್ರಗಳನ್ನು ಹಾಗೂ ಕೊನೆಯಲ್ಲಿ ವ್ಯಾಸಂಗ ಮಾಡಿದ ಶಾಲೆ / ವಿದ್ಯಾಲಯದಿಂದ ಪಡೆದ ಒಂದು ಪ್ರಮಾಣ ಪತ್ರವನ್ನು ಲಗತ್ತಿಸತಕ್ಕದ್ದು.

6. ಶೀಘ್ರಲಿಪಿಗಾರ, ಮತ್ತು ಬೆರಳಚ್ಚು - ನಕಲುಗಾರ ಹುದ್ದೆಗಳ ಅಭ್ಯರ್ಥಿಗಳಿಗೆ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ನಡೆಸಿ ಅರ್ಹ ಅಭ್ಯರ್ಥಿಗಳಿಗೆ ಮಾತ್ರ 1:5 ರ ಅನುಪಾತದಲ್ಲಿ ಸಂದರ್ಶನಕ್ಕೆ ಕರೆ ನೀಡಲಾಗುವುದು.

7. ಜವಾನರ ಹುದ್ದೆಯ ಅಭ್ಯರ್ಥಿಗಳಿಗೆ ಗರಿಷ್ಟ ಅಂಕ ಆಧಾರದ ಅರ್ಹತೆ ಮೇರೆಗೆ 1:10 ರ ಅನುಪಾತದಲ್ಲಿ ಸಂದರ್ಶನಕ್ಕೆ ಕರೆ ನೀಡಲಾಗುವುದು.

8. ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕವು ಸಾರ್ವತ್ರಿಕ ರಜಾ ದಿನವಾಗಿ ಘೋಷಿಸಲ್ಪಟ್ಟರೆ ಆ ದಿನಾಂಕದ ಮಾರನೆಯ ಕೆಲಸದ ದಿನವು ಅರ್ಜಿಗಳನ್ನು ಸ್ವೀಕರಿಸಲು ಕೊನೆಯ ದಿನಾಂಕವಾಗುವುದು.

**Evg ¸ÆZ£U½Ä B**

1. ಅಭ್ಯರ್ಥಿಗಳು ನೇಮಕಾತಿ ಸಂಬಂಧದಲ್ಲಿ ಯಾವುದೇ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅನುಸರಿಸುವುದು ಕಂಡು ಬಂದಲ್ಲಿ ಅಂತಹವರನ್ನು ನೇಮಕಾತಿಗೆ ಪರಿಗಣಿಸಲಾಗುವುದಿಲ್ಲ.

2. ಅಪೂರ್ಣವಾಗಿರುವ, ಸಹಿ ಮಾಡದ ಮತ್ತು ವಿದ್ಯಾರ್ಹತೆ, ಮೀಸಲಾತಿ ಹಾಗೂ ವಯೋಮಿತಿ ರಿಯಾಯಿತಿ ಬಗ್ಗೆ ಸಂಬಂಧಪಟ್ಟ ದಾಖಲೆಗಳನ್ನು ಹೊಂದಿರದ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

3. ಸರ್ಕಾರಿ ಮತ್ತು ಅರೆ ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳು ತಮ್ಮ ಅರ್ಜಿಗಳನ್ನು ಸಮುಚಿತ ಮಾರ್ಗದ ಮುಖಾಂತರ ಸಲ್ಲಿಸಬೇಕು.

4. ಅರ್ಜಿದಾರರು ಯಾವ ಹುದ್ದೆಗಳಿಗೆ ಅರ್ಜಿಗಳನ್ನು ಸಲ್ಲಿಸುತ್ತಿದ್ದಾರೆಂಬುದನ್ನು ದಪ್ಪ ಅಕ್ಷರಗಳಲ್ಲಿ ಲಕೋಟೆಯ ಮೇಲೆ ಹುದ್ದೆಯ ಹೆಸರನ್ನು ಕಡ್ಡಾಯವಾಗಿ ನಮೂದಿಸತಕ್ಕದ್ದು.

5. ಅಭ್ಯರ್ಥಿಗಳು ತಮ್ಮ ಅರ್ಜಿಯೊಂದಿಗೆ 5-00 ರೂಪಾಯಿ ಅಂಚೆ ಮುದ್ರಾಂಕ (ಪೋಸ್ಟಲ್ ಸ್ಟ್ಯಾಂಪ್) ವನ್ನು ಹೊಂದಿರುವ ಸ್ವ - ವಿಳಾಸದ ಲಕೋಟೆಯನ್ನು ಸಲ್ಲಿಸತಕ್ಕದ್ದು.

6. ಅಭ್ಯರ್ಥಿಗೆ ಸಂದರ್ಶನಕ್ಕೆ ಹಾಜರಾಗಲು ಮಾಹಿತಿ ಸಿಗದಿದ್ದ ಪಕ್ಷದಲ್ಲಿ ಅವರು ಸಂದರ್ಶನಕ್ಕೆ ಹಾಜರಾಗಲು ಅನರ್ಹರೆಂದು ತಿಳಿಯತಕ್ಕದ್ದು. ಈ ಬಗ್ಗೆ ಕಛೇರಿಯೊಂದಿಗೆ ಯಾವುದೇ ಪತ್ರ ವ್ಯವಹಾರವನ್ನು ನಡೆಸಲು ಆಸ್ಪದವಿರುವುದಿಲ್ಲ.

7. ವಿವರಗಳನ್ನು ಕಾಲಂಗಳಲ್ಲಿ ಭರ್ತಿ ಮಾಡಿ ಬರೆದು ಅರ್ಜಿಗಳನ್ನು ಅಂಚೆ ಮೂಲಕ ಸಲ್ಲಿಸುವುದು ಅಥವಾ ಖುದ್ದಾಗಿ ತಂದು ಸಲ್ಲಿಸಿದಲ್ಲಿ ಈ ಕಛೇರಿಯ ವೇಳೆಯಲ್ಲಿ ಮಾತ್ರ ಸ್ವೀಕರಿಸಲಾಗುವುದು.

8. ನೈತಿಕ ದುರ್ನಡತೆಯಿಂದಾಗಿ / ನೀತಿಬಾಹಿರ ಚಟುವಟಿಕೆಗಳಿಂದಾಗಿ ನ್ಯಾಯಾಲಯದಿಂದ ಶಿಕ್ಷೆಗೊಳಪಟ್ಟಿರುವ ವ್ಯಕ್ತಿ ಅಥವಾ ರಾಜ್ಯ / ಕೇಂದ್ರ / ಸ್ಥಳೀಯ ಸಂಸ್ಥೆ ಕಛೇರಿಗಳಲ್ಲಿ ನೈತಿಕ ದುರ್ನಡತೆಯಿಂದಾಗಿ ಅಥವಾ ನೀತಿಬಾಹಿರ ಚಟುವಟಿಕೆಗಳಲ್ಲಿ ಒಳಗಾಗಿ ಅಥವಾ ಆಯ್ಕೆಯಾದ ಅಭ್ಯರ್ಥಿಯು ಬದಲಿಯಾಗಿ ಕಾರ್ಯ ನಿರ್ವಹಿಸುತ್ತಿದ್ದ ಸಂದರ್ಭದಲ್ಲಿ ಕಾನೂನು ಬಾಹಿರ / ನೀತಿ ಬಾಹಿರ ಚಟುವಟಿಕೆಗಳಲ್ಲಿ ತೊಡಗಿ ಸೇವೆಯಿಂದ ತೆಗೆದು ಹಾಕಿದ್ದಲ್ಲಿ / ವಜಾ ಮಾಡಲ್ಪಟ್ಟಿದ್ದು ಕಂಡು ಬಂದಲ್ಲಿ ನೇಮಕಾತಿಗೆ ಅನರ್ಹರಾಗುತ್ತಾರೆ.

9. ಅರ್ಜಿಯಲ್ಲಿ ತಪ್ಪು ಮಾಹಿತಿ ನೀಡಿ ಉದ್ಯೋಗ ಪಡೆಯುವ ಅಭ್ಯರ್ಥಿಗಳನ್ನು ಯಾವುದೇ ಸಮಯದಲ್ಲಾದರೂ ವಜಾ ಮಾಡಲಾಗುತ್ತದೆ.

10. ಅಭ್ಯರ್ಥಿಗಳ ಆಯ್ಕೆಯ ವಿಷಯದಲ್ಲಿ ಆಯ್ಕೆ ಪ್ರಾಧಿಕಾರದ ನಿರ್ಧಾರವೇ ಅಂತಿಮವಾಗಿರುತ್ತದೆ.

11. ಪಿಂಚಣಿ ಸೌಲಭ್ಯ : ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ(ಎಸ್‌ಪಿಎಲ್) 04 ಪಿಇಟಿ 2005, ದಿನಾಂಕ 31.03.2006 ರಂತೆ.

12. ಕೊನೆಯ ದಿನಾಂಕದ ನಂತರ ಸಲ್ಲಿಸಲಾದ ಯಾವುದೇ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಅಂಚೆ ಮೂಲಕ ನಿಗದಿತ ದಿನಾಂಕದ ನಂತರ ಬಂದ ಅರ್ಜಿಗಳನ್ನು ಗಣನೆಗೆ ತೆಗೆದುಕೊಳ್ಳಲಾಗುವುದಿಲ್ಲ.

13. ಮೇಲ್ಕಂಡ ಹುದ್ದೆಗಳ ಸಂಖ್ಯೆ ಬದಲಾವಣೆಗೆ ಒಳಪಟ್ಟಿದೆ.

**ªiÁ¸Ìgï DgïPf JA.JA ªÄºÁ¸Á«ÄÃf**
ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಚಾಮರಾಜನಗರ.

# Cfð £ªÄÆ£

ಇತ್ತೀಚಿನ ಭಾವಚಿತ್ರ
ಲಗತ್ತಿಸಿ ಸಹಿ
ಮಾಡುವುದು

ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಜಿಲ್ಲಾ ಮತ್ತು ಸತ್ರ ನ್ಯಾಯಾಲಯ,
ಚಾಮರಾಜನಗರ.

ಮಾನ್ಯರೇ,

ಚಾಮರಾಜನಗರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ಪ್ರಕಟಣೆ ಸಂಖ್ಯೆ: ಎಡಿಎಂಎನ್/**.............**/2011 ದಿನಾಂಕ15.11.2011ರ ಪ್ರಕಾರ ಶೀಘ್ರಲಿಪಿಗಾರರ / ನಕಲುಬೆರಳಚ್ಚುಗಾರರ ಹುದ್ದೆಗೆ ನಾನು ಈ ಮೂಲಕ ನನ್ನ ವಿವರದೊಂದಿಗೆ ಅರ್ಜಿ ಸಲ್ಲಿಸಿರುತ್ತೇನೆ.

| | | |
|---|---|---|
| 1 | ಅಭ್ಯರ್ಥಿಯ ಹೆಸರು | |
| 2 | ತಂದೆಯ / ತಾಯಿಯ / ಗಂಡನ ಹೆಸರು | |
| 3 | ಪೂರ್ಣ ವಿಳಾಸ | |
| 4 | ಜನ್ಮ ದಿನಾಂಕ ಮತ್ತು ವಯಸ್ಸು | |
| 5 | ಲಿಂಗ | ಪುರುಷ / ಮಹಿಳೆ |
| 6 | ವಿವಾಹಿತರಾಗಿದ್ದರೆ ಗಂಡನ ಅಥವ ಹೆಂಡತಿಯ ಹೆಸರು | |
| 7 | ಯಾವ ಮೀಸಲಾತಿಯಡಿಯಲ್ಲಿ ನೇಮಕಾತಿ ಅಪೇಕ್ಷಿಸುವಿರಿ | |
| 8 | ರಾಷ್ಟ್ರೀಯತೆ :<br>ಜಾತಿ / ಉಪಜಾತಿ : | |
| 9 | ಶೈಕ್ಷಣಿಕ ವಿದ್ಯಾರ್ಹತೆಯ ವಿವರಗಳು : ( ಸ್ವಯಂ ದೃಢೀಕೃತ ಪ್ರಮಾಣ ಪತ್ರಗಳನ್ನು ಸಲ್ಲಿಸತಕ್ಕದ್ದು) | |

| | ಉತ್ತೀರ್ಣ ಹೊಂದಿದ ಪರೀಕ್ಷೆಗಳು | ಉತ್ತೀರ್ಣ ಹೊಂದಿದ ವರ್ಷ ಮತ್ತು ನೊಂದಣಿ ಸಂಖ್ಯೆ: | ಗರಿಷ್ಠ ಅಂಕಗಳು | ಪಡೆದಿರುವ ಅಂಕಗಳು | ಶೇಕಡಾವಾರು ಅಂಕಗಳು |
|---|---|---|---|---|---|
| ಎ | ಎಸ್.ಎಸ್.ಎಲ್.ಸಿ. / ತತ್ಸಮಾನ ಪರೀಕ್ಷೆ | | | | |
| ಬಿ | ಕಿರಿಯ ದರ್ಜೆಯ ಕನ್ನಡ ಬೆರಳಚ್ಚು ಪರೀಕ್ಷೆ | | | | |
| ಸಿ | ಹಿರಿಯ ದರ್ಜೆಯ ಕನ್ನಡ ಬೆರಳಚ್ಚು ಪರೀಕ್ಷೆ | | | | |
| ಡಿ | ಕಿರಿಯ ದರ್ಜೆಯ ಆಂಗ್ಲ ಬೆರಳಚ್ಚು ಪರೀಕ್ಷೆ | | | | |
| ಇ | ಹಿರಿಯ ದರ್ಜೆಯ ಆಂಗ್ಲ ಬೆರಳಚ್ಚು ಪರೀಕ್ಷೆ | | | | |
| ಎಫ್ | ಹಿರಿಯ ದರ್ಜೆಯ ಕನ್ನಡ ಶೀಘ್ರಲಿಪಿ ಪರೀಕ್ಷೆ | | | | |
| ಜಿ | ಹಿರಿಯ ದರ್ಜೆಯ ಆಂಗ್ಲ ಶೀಘ್ರಲಿಪಿ ಪರೀಕ್ಷೆ | | | | |
| ಹೆಚ್ | ಇತರೆ ವಿದ್ಯಾರ್ಹತೆಗಳು ಇದ್ದಲ್ಲಿ | | | | |

| | | |
|---|---|---|
| 10 | ಜಾತಿ / ಗ್ರಾಮೀಣ / ಅಂಗವಿಕಲ / ಮೀಸಲಾತಿ ಸೌಲಭ್ಯ ಪಡೆಯ ಬಯಸುವ ಅಭ್ಯರ್ಥಿಗಳು ಸಂಬಂಧಪಟ್ಟ ಅಧಿಕಾರಿಗಳಿಂದ ಪಡೆದ ಪ್ರಮಾಣ ಪತ್ರ ಲಗತ್ತಿಸಬೇಕು. | |
| 11 | ನೀವು ಪ್ರಸ್ತುತ ಸರ್ಕಾರಿ ಸೇವೆಯಲ್ಲಿರುವಿರಾ ? (ಸರ್ಕಾರಿ ಸೇವೆಯಲ್ಲಿದ್ದಲ್ಲಿ ನೇಮಕಾತಿ ಪ್ರಾಧಿಕಾರದಿಂದ ಪಡೆದ ನಿರಾಕ್ಷೇಪಣ ಪತ್ರದ ನಕಲನ್ನು ಲಗತ್ತಿಸಬೇಕು) | |
| 1 2 | .ಅರ್ಜಿ ಶುಲ್ಕ ಸಲ್ಲಿಸಿದ ಬಗ್ಗೆ ವಿವರ | 1. ಐ.ಪಿ.ಓ ಸಂಖ್ಯೆ ಮತ್ತು ದಿನಾಂಕ :<br>2. ಐ.ಪಿ.ಓ ಮೊಬಲಗು :<br>3. ಐ.ಪಿ.ಓ ಪಡೆದ ಅಂಚೆ ಕಛೇರಿ ವಿಳಾಸ: |
| 13 | ಸಲ್ಲಿಸಲು ಇಚ್ಛಿಸುವ ಇತರ ಯಾವುದಾದರೂ ವಿವರಗಳು | |

ಸೂಚನೆ : ಅಭ್ಯರ್ಥಿಯು ತನಗೆ ಅನ್ವಯವಾಗದ್ದನ್ನು ಹೊಡೆದು ಹಾಕತಕ್ಕದ್ದು .

**WÆÃµu**

ಈ ಮೇಲೆ ನಮೂದಿಸಿರುವ ಮಾಹಿತಿ ಮತ್ತು ವಿವರಗಳು ನನಗೆ ತಿಳಿದ ಮಟ್ಟಿಗೆ ಸತ್ಯವಾಗಿದ್ದು ಹಾಗೂ ಒಂದು ವೇಳೆ ಅವು ಅಸತ್ಯವೆಂದು ಕಂಡು ಬಂದಲ್ಲಿ ನನ್ನ ಅಭ್ಯರ್ಥಿತನವನ್ನು ಬಿಟ್ಟು ಬಿಡಲು ನಾನು ಬದ್ಧನಾಗಿರುತ್ತೇನೆ / ಬದ್ಧಳಾಗಿರುತ್ತೇನೆ. ನಾನು ಆಯ್ಕೆಗೊಂಡರೆ ಚಾಮರಾಜನಗರ ಜಿಲ್ಲಾ ನ್ಯಾಯಾಂಗ ಘಟಕದ ಯಾವುದೇ ನ್ಯಾಯಾಲಯಗಳಲ್ಲಿ ಕರ್ತವ್ಯ ನಿರ್ವಹಿಸಲು ಸಿದ್ಧನಿದ್ದೇನೆ / ಸಿದ್ಧಳಿದ್ದೇನೆ.

ಸ್ಥಳ :

ದಿನಾಂಕ : **C¨lyðAiÄ ¸»**

**Cfð £ªÄÆ£**

ಇತ್ತೀಚಿನ ಭಾವಚಿತ್ರ ಲಗತ್ತಿಸಿ ಸಹಿ ಮಾಡುವುದು

ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಜಿಲ್ಲಾ ಮತ್ತು ಸತ್ರ ನ್ಯಾಯಾಲಯ,
ಚಾಮರಾಜನಗರ.

ಮಾನ್ಯರೇ,

ಚಾಮರಾಜನಗರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ಪ್ರಕಟಣೆ ಸಂಖ್ಯೆ: ಎಡಿಎಂಎಸ್/ ........../2011 ದಿನಾಂಕ15.11.2011 ರ ಪ್ರಕಾರ ಸೇವಕರ ಹುದ್ದೆಗೆ ನಾನು ಈ ಮೂಲಕ ನನ್ನ ವಿವರದೊಂದಿಗೆ ಅರ್ಜಿ ಸಲ್ಲಿಸಿರುತ್ತೇನೆ.

| | | |
|---|---|---|
| 1 | ಅಭ್ಯರ್ಥಿಯ ಹೆಸರು | |
| 2 | ತಂದೆಯ / ತಾಯಿಯ / ಗಂಡನ ಹೆಸರು | |
| 3 | ಪೂರ್ಣ ವಿಳಾಸ | |
| 4 | ಜನ್ಮ ದಿನಾಂಕ ಮತ್ತು ವಯಸ್ಸು | |
| 5 | ಲಿಂಗ | ಪುರುಷ / ಮಹಿಳೆ |

| | | | | | |
|---|---|---|---|---|---|
| 6 | ವಿವಾಹಿತರಾಗಿದ್ದರೆ ಗಂಡನ ಅಥವ ಹೆಂಡತಿಯ ಹೆಸರು | | | | |
| 7 | ಯಾವ ಮೀಸಲಾತಿಯಡಿಯಲ್ಲಿ ನೇಮಕಾತಿ ಅಪೇಕ್ಷಿಸುವಿರಿ | | | | |
| 8 | ರಾಷ್ಟ್ರೀಯತೆ ಃ<br>ಜಾತಿ / ಉಪಜಾತಿ ಃ | | | | |
| 9 | ಶೈಕ್ಷಣಿಕ ವಿದ್ಯಾರ್ಹತೆಯ ವಿವರಗಳು ಃ ( ಸ್ವಯಂ ದೃಢೀಕೃತ ಪ್ರಮಾಣ ಪತ್ರಗಳನ್ನು ಸಲ್ಲಿಸತಕ್ಕದ್ದು) | | | | |
| | ಉತ್ತೀರ್ಣ ಹೊಂದಿದ ಪರೀಕ್ಷೆಗಳು | ಉತ್ತೀರ್ಣ ಹೊಂದಿದ ವರ್ಷ ಮತ್ತು ನೊಂದಣಿ ಸಂಖ್ಯೆಃ | ಗರಿಷ್ಟ ಅಂಕಗಳು | ಪಡೆದಿರುವ ಅಂಕಗಳು | ಶೇಕಡಾವಾರು ಅಂಕಗಳು |
| ಎ | ೭ನೇ ತರಗತಿ ಪರೀಕ್ಷೆ | | | | |
| ಬಿ | ಇತರೆ ವಿದ್ಯಾರ್ಹತೆಗಳು ಇದ್ದಲ್ಲಿ | | | | |
| 10 | ಜಾತಿ / ಅಂಗವಿಕಲ / ಮೀಸಲಾತಿ ಸೌಲಭ್ಯ ಪಡೆಯ ಬಯಸುವ ಅಭ್ಯರ್ಥಿಗಳು ಸಂಬಂಧಪಟ್ಟ ಅಧಿಕಾರಿಗಳಿಂದ ಪಡೆದ ಪ್ರಮಾಣ ಪತ್ರ ಲಗತ್ತಿಸಬೇಕು. | | | | |
| 11 | ನೀವು ಪ್ರಸ್ತುತ ಸರ್ಕಾರಿ ಸೇವೆಯಲ್ಲಿರುವಿರಾ ? (ಸರ್ಕಾರಿ ಸೇವೆಯಲ್ಲಿದ್ದಲ್ಲಿ ನೇಮಕಾತಿ ಪ್ರಾಧಿಕಾರದಿಂದ ಪಡೆದ ನಿರಾಕ್ಷೇಪಣ ಪತ್ರದ ನಕಲನ್ನು ಲಗತ್ತಿಸಬೇಕು) | | | | |
| 12 | ಅರ್ಜಿ ಶುಲ್ಕ ಸಲ್ಲಿಸಿದ ಬಗ್ಗೆ ವಿವರ | 1. ಐ.ಪಿ.ಓ ಸಂಖ್ಯೆ ಮತ್ತು ದಿನಾಂಕ ಃ<br>2. ಐ.ಪಿ.ಓ ಮೊಬಲಗು ಃ<br>3. ಐ.ಪಿ.ಓ ಪಡೆದ ಅಂಚೆ ಕಛೇರಿ ವಿಳಾಸಃ | | | |
| 13 | ಸಲ್ಲಿಸಲು ಇಚ್ಛೆ ಪಡುವ ಇತರ ಯಾವುದಾದರೂ ವಿವರಗಳು | | | | |

ಸೂಚನೆ ಃ ಅಭ್ಯರ್ಥಿಯು ತನಗೆ ಅನ್ವಯವಾಗದ್ದನ್ನು ಹೊಡೆದು ಹಾಕತಕ್ಕದ್ದು.

**WÆÃµu**

ಈ ಮೇಲೆ ನಮೂದಿಸಿರುವ ಮಾಹಿತಿ ಮತ್ತು ವಿವರಗಳು ನನಗೆ ತಿಳಿದ ಮಟ್ಟಿಗೆ ಸತ್ಯವಾಗಿದ್ದು ಹಾಗೂ ಒಂದು ವೇಳೆ ಅವು ಅಸತ್ಯವೆಂದು ಕಂಡು ಬಂದಲ್ಲಿ ನನ್ನ ಅಭ್ಯರ್ಥಿತನವನ್ನು ಬಿಟ್ಟು ಬಿಡಲು ನಾನು ಬದ್ಧನಾಗಿರುತ್ತೇನೆ / ಬದ್ಧಳಾಗಿರುತ್ತೇನೆ. ನಾನು ಆಯ್ಕೆಗೊಂಡರೆ ಚಾಮರಾಜನಗರ ಜಿಲ್ಲಾ ನ್ಯಾಯಾಂಗ ಘಟಕದ ಯಾವುದೇ ನ್ಯಾಯಾಲಯಗಳಲ್ಲಿ ಕರ್ತವ್ಯ ನಿರ್ವಹಿಸಲು ಸಿದ್ಧನಿದ್ದೇನೆ / ಸಿದ್ಧಳಿದ್ದೇನೆ.

ಸ್ಥಳ ಃ
ದಿನಾಂಕ ಃ ಅಭ್ಯರ್ಥಿಯ ಸಹಿ

ಪಿ.ಆರ್. 335

**ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ಕಛೇರಿ, ದ. ಕನ್ನಡ, ಮಂಗಳೂರು**

**No.ADMN/11687/2011, ದಿನಾಂಕಃ 31–10–2011.**

**ವಿಷಯಃ** ಶೀಘ್ರಲಿಪಿಗಾರರು, ಬೆರಳಚ್ಚುಗಾರರು ಮತ್ತು ಬೆರಳಚ್ಚು–ನಕಲುಗಾರರು, ಆದೇಶಿಕ ಜ್ಯಾರಿಕಾರರು, ವಾಹನ ಚಾಲಕ ಮತ್ತು ಜವಾನ ಹುದ್ದೆಗಳಿಗೆ ಅಭ್ಯರ್ಥಿಗಳನ್ನು ಆಯ್ಕೆ ಮಾಡುವ ಬಗ್ಗೆ.

**ಉಲ್ಲೇಖಃ** (1) ಉಚ್ಛ ನ್ಯಾಯೂಲಯ ಪತ್ರ ಸಂಖ್ಯೆಃ ಎಲ್‌ಸಿಎ–II/205/2004 ದಿನಾಂಕ 17–6–2009.
(2) ಉಚ್ಛ ನ್ಯಾಯೂಲಯ ಪತ್ರ ಸಂಖ್ಯೆಃ ಎಲ್‌ಸಿಎ– II /160/2009 ದಿನಾಂಕ 18–3–2010.
(3) ಉಚ್ಛ ನ್ಯಾಯೂಲಯ ಪತ್ರ ಸಂಖ್ಯೆಃ ಎಲ್‌ಸಿಎ– II/230/1996 ದಿನಾಂಕ 08–3–2010.
(4) ಉಚ್ಛ ನ್ಯಾಯೂಲಯ ಪತ್ರ ಸಂಖ್ಯೆಃ ಎಲ್‌ಸಿಎ– II /36/2003 ದಿನಾಂಕ 23–6–2011.
(5) ಉಚ್ಛ ನ್ಯಾಯೂಲಯ ಪತ್ರ ಸಂಖ್ಯೆಃ ಎಲ್‌ಸಿಎ– II /54/2011 ದಿನಾಂಕ 01–10–2011.

ಮೇಲ್ಕಂಡ ಅಧಿಸೂಚನೆಯನ್ವಯ ಮಂಗಳೂರಿನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ಹಾಗೂ ಅಧೀನ ನ್ಯಾಯಾಲಯಗಳಲ್ಲಿ ಖಾಲಿ ಇರುವ ಹಾಗೂ ಹೊಸದಾಗಿ ಸೃಜಿಸಲಾಗಿರುವ ಶೀಘ್ರಲಿಪಿಗಾರರು–20, ಬೆರಳಚ್ಚುಗಾರರು–6, ನಕಲು ಬೆರಳಚ್ಚುಗಾರರು–3, ಆದೇಶಿಕ ಜ್ಯಾರಿಕಾರರು–11 ವಾಹನ ಚಾಲಕ–1 ಮತ್ತು ಜವಾನ–4 ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ.

**ಅರ್ಜಿ ಸಲ್ಲಿಸಲು ನಿಗದಿ ಪಡಿಸಿರುವ ಕಡೆಯ ದಿನಾಂಕ** : 12–12–2011

1. **ಶೀಘ್ರಲಿಪಿಗಾರರು (Stenographers)**:– ಹುದ್ದೆಗಳ ಸಂಖ್ಯೆ – **20**

**ವೇತನ ಶ್ರೇಣಿ**: 7275–175–7800–200–8600–225–9500–250–10500–300–12300–350–13350

**ಹುದ್ದೆಗಳ ವರ್ಗೀಕರಣಃ**

| ವರ್ಗ | ಮಹಿಳೆ | ಗ್ರಾಮೀಣ | ಯೋ.ನಿ.ಅ. | ಮಾ.ಸೈ | ಅಂ.ಅ | ಇತರೆ | ಒಟ್ಟು |
|---|---|---|---|---|---|---|---|
| ಸಾ. ಅ. | 3 | 2 | 1 | 1 | 1 | 2 | 10 |
| ಪ. ಜಾ. | 1 | 1 | – | – | – | 1 | 03 |
| ಪ. ಪಂ. | 1 | – | – | – | – | – | 01 |
| **II – ಎ** | 1 | 1 | – | – | – | 1 | 03 |
| **III – ಎ** | 1 | – | – | – | – | – | 01 |
| **II – ಬಿ** | 1 | – | – | – | – | – | 01 |
| **III – ಬಿ** | 1 | – | – | – | – | – | 01 |
| **ಒಟ್ಟು** | **9** | **4** | **1** | **1** | **1** | **4** | **20** |

**ವಿದ್ಯಾರ್ಹತೆ** ಃ (ಎ) ಅರ್ಜಿ ಸಲ್ಲಿಸಲು ನಿಗದಿ ಪಡಿಸಿರುವ ಕಡೆಯ ದಿನಾಂಕದಂದು ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು ನಡೆಸುವ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿರಬೇಕು.

(ಬಿ) ಕನ್ನಡ ಮತ್ತು ಆಂಗ್ಲ ಬೆರಳಚ್ಚು ಪ್ರೌಢ ದರ್ಜೆ (Senior Grade) ಹಾಗೂ ಕನ್ನಡ ಮತ್ತು ಆಂಗ್ಲ ಶೀಘ್ರಲಿಪಿ ಪ್ರೌಢ ದರ್ಜೆ (Senior Grade) ಪರೀಕ್ಷೆಯಲ್ಲಿ ತೇರ್ಗಡೆ ಅಥವಾ ತತ್ಸಮಾನ ವಿದ್ಯಾರ್ಹತೆಯನ್ನು ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಉತ್ತೀರ್ಣರಾಗಿರಬೇಕು.

**ಆಯ್ಕೆಯ ವಿಧಾನಃ** ಅಧೀನ ನ್ಯಾಯಾಲಯಗಳ (ಲಿಪಿಕ ಮತ್ತು ಇತರ ಹುದ್ದೆಗಳ) (ತಿದ್ದುಪಡಿ) ನೇಮಕಾತಿ ನಿಯಮಗಳು 2007 ರ ಪ್ರಕಾರ ನೇಮಕಾತಿಯನ್ನು ನಡೆಸಲಾಗುವುದು.

2. **ಬೆರಳಚ್ಚುಗಾರರು (Typist) :–** ಹುದ್ದೆಗಳ ಸಂಖ್ಯೆ – **6**

**ವೇತನ ಶ್ರೇಣಿ**: 5800–100–6000–125–6500–150–7100–175–7800–200–8600–225–9500–250–10500

ಹುದ್ದೆಗಳ ವರ್ಗೀಕರಣಃ:–

| ವರ್ಗ | ಮಹಿಳೆ | ಗ್ರಾಮೀಣ | ಯೋ.ನಿ.ಅ. | ಮಾ.ಸೈ | ಅಂ.ಅ | ಇತರೆ | ಒಟ್ಟು |
|---|---|---|---|---|---|---|---|
| ಸಾ. ಅ. | 1 | 1 | – | – | – | 1 | 03 |

| | | | | | | | |
|---|---|---|---|---|---|---|---|
| **II – ಎ** | – | – | – | – | – | 1 | 01 |
| **III - ಎ** | 1 | – | – | – | – | – | 01 |
| **III- ಬಿ** | 1 | – | – | – | – | – | 01 |
| **ಒಟ್ಟು** | **3** | **1** | – | – | – | **2** | **06** |

**ವಿದ್ಯಾರ್ಹತೆ :** (ಎ) ಅರ್ಜಿಸಲ್ಲಿಸಲು ನಿಗದಿ ಪಡಿಸಿರುವ ಕಡೆಯ ದಿನಾಂಕದಂದು ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು ನಡೆಸುವ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿರಬೇಕು.

(ಬಿ) ಕನ್ನಡ ಮತ್ತು ಆಂಗ್ಲ ಬೆರಳಚ್ಚು ಪ್ರೌಢ ದರ್ಜೆ (Senior Grade) ಪರೀಕ್ಷೆಯಲ್ಲಿ ತೇರ್ಗಡೆ ಅಥವಾ ತತ್ಸಮಾನ ವಿದ್ಯಾರ್ಹತೆಯನ್ನು ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಉತ್ತೀರ್ಣರಾಗಿರಬೇಕು.

**ಆಯ್ಕೆಯ ವಿಧಾನ:** ಅಧೀನ ನ್ಯಾಯಾಲಯಗಳ (ಲಿಪಿಕ ಮತ್ತು ಇತರ ಹುದ್ದೆಗಳ) ನೇಮಕಾತಿ (ತಿದ್ದುಪಡಿ) ನಿಯಮಗಳು 2007 ರ ಪ್ರಕಾರ ನೇಮಕಾತಿಯನ್ನು ನಡೆಸಲಾಗುವುದು.

**3. ಬೆರಳಚ್ಚು ನಕಲುಗಾರರು (Typist-Copyist) :–** ಹುದ್ದೆಗಳ ಸಂಖ್ಯೆ **– 3**

**ವೇತನ ಶ್ರೇಣಿ :** 5800–100–6000–125–6500–150–7100–175–7800–200–8600–225–9500–250–10500

**ಹುದ್ದೆಗಳ ವರ್ಗೀಕರಣ:–**

| ವರ್ಗ | ಮಹಿಳೆ | ಗ್ರಾಮೀಣ | ಯೋ.ನಿ.ಅ. | ಮಾ.ಸೈ | ಅಂ.ಅ | ಇತರೆ | ಒಟ್ಟು |
|---|---|---|---|---|---|---|---|
| ಸಾ. ಅ. | 1 | – | 1 | – | – | – | 02 |
| **II – ಬಿ** | 1 | – | – | – | – | – | 01 |
| **ಒಟ್ಟು** | **2** | – | **1** | – | – | – | **03** |

**ವಿದ್ಯಾರ್ಹತೆ :** (ಎ) ಅರ್ಜಿ ಸಲ್ಲಿಸಲು ನಿಗದಿ ಪಡಿಸಿರುವ ಕಡೆಯ ದಿನಾಂಕದಂದು ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು ನಡೆಸುವ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿರಬೇಕು.

(ಬಿ) ಕನ್ನಡ ಮತ್ತು ಆಂಗ್ಲ ಎರಡೂ ಭಾಷೆಯಲ್ಲಿ ಕಿರಿಯ ಶ್ರೇಣಿ ಬೆರಳಚ್ಚು ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಉತ್ತೀರ್ಣರಾಗಿರಬೇಕು.

**ಆಯ್ಕೆಯ ವಿಧಾನ:** ಅಧೀನ ನ್ಯಾಯಾಲಯಗಳ (ಲಿಪಿಕ ಮತ್ತು ಇತರ ಹುದ್ದೆಗಳ) ನೇಮಕಾತಿ (ತಿದ್ದುಪಡಿ) ನಿಯಮಗಳು 2007 ರ ಪ್ರಕಾರ ನೇಮಕಾತಿಯನ್ನು ನಡೆಸಲಾಗುವುದು.

**4. ಆದೇಶಿಕ ಜ್ಯಾರಿಕಾರರು (Process Servers) : ಹುದ್ದೆಗಳ ಸಂಖ್ಯೆ – 11**

**ವೇತನ ಶ್ರೇಣಿ:** 5500–100–6000–125–6500–150–7100–175–7800–200– 8600 –225–9500.

**ಹುದ್ದೆಗಳ ವರ್ಗೀಕರಣ:**

| ವರ್ಗ | ಮಹಿಳೆ | ಗ್ರಾಮೀಣ | ಯೋ.ನಿ.ಅ. | ಮಾ.ಸೈ | ಅಂ.ಅ | ಇತರೆ | ಒಟ್ಟು |
|---|---|---|---|---|---|---|---|
| ಸಾ. ಅ. | 2 | 1 | 1 | 1 | 1 | – | 06 |
| ಪ. ಜಾ. | 1 | – | – | – | – | – | 01 |
| ಪ. ಪಂ. | – | 1 | – | – | – | – | 01 |

| ವರ್ಗ | ಮಹಿಳೆ | ಗ್ರಾಮೀಣ | ಯೋ.ನಿ.ಅ. | ಮಾ.ಸೈ | ಅಂ.ಅ | ಇತರೆ | ಒಟ್ಟು |
|---|---|---|---|---|---|---|---|
| II – ಎ | 1 | – | – | – | – | 1 | 02 |
| III – ಎ | – | 1 | – | – | – | – | 01 |
| **ಒಟ್ಟು** | **4** | **3** | **1** | **1** | **1** | **1** | **11** |

**ವಿದ್ಯಾರ್ಹತೆ :** ಅರ್ಜಿ ಸಲ್ಲಿಸಲು ನಿಗದಿ ಪಡಿಸಿರುವ ಕಡೆಯ ದಿನಾಂಕದಂದು ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು ನಡೆಸುವ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿರಬೇಕು ಮತ್ತು ಲಘು /ಭಾರೀ ವಾಹನಾ ಚಾಲನಾ ಪರವಾನಗಿ ಹೊಂದಿದ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು.

**ಆಯ್ಕೆಯ ವಿಧಾನಃ** (ಅ) ಅಧೀನ ನ್ಯಾಯಾಲಯಗಳ (ಲಿಪಿಕ ಮತ್ತು ಇತರ ಹುದ್ದೆಗಳ) ನೇಮಕಾತಿ (ತಿದ್ದುಪಡಿ) ನಿಯಮಗಳು 2007 ರ ಪ್ರಕಾರ ನೇಮಕಾತಿಯನ್ನು ನಡೆಸಲಾಗುವುದು.

(ಬ) ಆದೇಶಿಕ ಜ್ಯಾರಿಕಾರ ಹುದ್ದೆಗೆ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಪಡೆದ ಗರಿಷ್ಠ ಅಂಕಗಳ ಅರ್ಹತೆಯ ಆಧಾರದ ಮೇಲೆ ಒಂದು ಹುದ್ದೆಗೆ 25 ಅಭ್ಯರ್ಥಿಗಳನ್ನು ಮಾತ್ರ ಸಂದರ್ಶನಕ್ಕೆ ಕರೆಯಲಾಗುವುದು.

5. **ವಾಹನ ಚಾಲಕ (Driver) :** ಹುದ್ದೆಗಳ ಸಂಖ್ಯೆ – **1**

**ವೇತನ ಶ್ರೇಣಿ:** 5800–100–6000–125–6500–150–7100–175–7800–200–8600–225–9500–250–10500

**ಹುದ್ದೆಗಳ ವರ್ಗೀಕರಣಃ**

| ವರ್ಗ | ಮಹಿಳೆ | ಗ್ರಾಮೀಣ | ಕ. ಮಾ. ಅ | ಇತರೆ | ಒಟ್ಟು |
|---|---|---|---|---|---|
| ಸಾ.ಅ. | – | – | – | 1 | 01 |
| **ಒಟ್ಟು :** | – | – | – | **1** | **01** |

**ವಿದ್ಯಾರ್ಹತೆ :** 1. ಅರ್ಜಿ ಸಲ್ಲಿಸಲು ನಿಗದಿ ಪಡಿಸಿರುವ ಕಡೆಯ ದಿನಾಂಕದಂದು 10ನೇ ತರಗತಿಯ ಪರೀಕ್ಷೆಯಲ್ಲಿ ತೇರ್ಗಡೆ ಅಥವಾ ತತ್ಸಮಾನ ವಿದ್ಯಾರ್ಹತೆ ಹೊಂದಿರಬೇಕು.

2. ಭಾರೀ ವಾಹನ ಚಾಲನ ಪರವಾನಿಗೆ ಪತ್ರವನ್ನು ಹೊಂದಿರಬೇಕು.

**ಆಯ್ಕೆಯ ವಿಧಾನಃ** (ಅ) ಅಧೀನ ನ್ಯಾಯಾಲಯಗಳ (ಲಿಪಿಕ ಮತ್ತು ಇತರ ಹುದ್ದೆಗಳ) ನೇಮಕಾತಿ (ತಿದ್ದುಪಡಿ) ನಿಯಮಗಳು 2007 ರ ಪ್ರಕಾರ ನೇಮಕಾತಿಯನ್ನು ನಡೆಸಲಾಗುವುದು.

(ಬ) ವಾಹನ ಚಾಲಕ ಹುದ್ದೆಗೆ 10ನೇ ತರಗತಿ ಪರೀಕ್ಷೆಯಲ್ಲಿ ಪಡೆದ ಗರಿಷ್ಠ ಅಂಕಗಳ ಅರ್ಹತೆಯ ಆಧಾರದ ಮೇಲೆ ಒಂದು ಹುದ್ದೆಗೆ 10 ಅಭ್ಯರ್ಥಿಗಳನ್ನು ಮಾತ್ರ ಸಂದರ್ಶನಕ್ಕೆ ಕರೆಯಲಾಗುವುದು.

5. **ಜವಾನ (Peons)** : ಹುದ್ದೆಗಳ ಸಂಖ್ಯೆ – **4**

**ವೇತನ ಶ್ರೇಣಿ :** 4800–100–6000–125–6500–150–7100–175–7275.

**ಹುದ್ದೆಗಳ ವರ್ಗೀಕರಣಃ**

| ವರ್ಗ | ಮಹಿಳೆ | ಗ್ರಾಮೀಣ | ಕ. ಮಾ. ಅ | ಇತರೆ | ಒಟ್ಟು |
|---|---|---|---|---|---|
| ಸಾ.ಅ. | – | 1 | – | 1 | 02 |
| ಪ.ಜಾ. | – | 1 | – | – | 01 |
| II– ಎ | 1 | – | – | – | 01 |
| **ಒಟ್ಟು :** | **1** | **2** | – | **1** | **04** |

**ವಿದ್ಯಾರ್ಹತೆ :** ಅರ್ಜಿ ಸಲ್ಲಿಸಲು ನಿಗದಿ ಪಡಿಸಿರುವ ಕಡೆಯ ದಿನಾಂಕದಂದು 7ನೇ ತರಗತಿಯ ಪರೀಕ್ಷೆಯಲ್ಲಿ ತೇರ್ಗಡೆ ಅಥವಾ ತತ್ಸಮಾನ ವಿದ್ಯಾರ್ಹತೆ ಹೊಂದಿರಬೇಕು.

**ಆಯ್ಕೆಯ ವಿಧಾನಃ** (ಅ) ಅಧೀನ ನ್ಯಾಯಾಲಯಗಳ (ಲಿಪಿಕ ಮತ್ತು ಇತರ ಹುದ್ದೆಗಳ) ನೇಮಕಾತಿ (ತಿದ್ದುಪಡಿ) ನಿಯಮಗಳು 2007 ರ ಪ್ರಕಾರ ನೇಮಕಾತಿಯನ್ನು ನಡೆಸಲಾಗುವುದು.

(ಬ) ಜವಾನ ಹುದ್ದೆಗೆ 7ನೇ ತರಗತಿ ಪರೀಕ್ಷೆಯಲ್ಲಿ ಪಡೆದ ಗರಿಷ್ಠ ಅಂಕಗಳ ಅರ್ಹತೆಯ ಆಧಾರದ ಮೇಲೆ ಒಂದು ಹುದ್ದೆಗೆ 10 ಅಭ್ಯರ್ಥಿಗಳನ್ನು ಮಾತ್ರ ಸಂದರ್ಶನಕ್ಕೆ ಕರೆಯಲಾಗುವುದು.

ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳಲ್ಲಿ, ಮಹಿಳಾ ಅಭ್ಯರ್ಥಿಗಳು, ಮಾಜಿ ಸೈನಿಕ ಅಭ್ಯರ್ಥಿಗಳು, ಅಂಗವಿಕಲ ಅಭ್ಯರ್ಥಿಗಳು, ಯೋಜನಾ ನಿರಾಶ್ರಿತ ಅಭ್ಯರ್ಥಿಗಳು, ಗ್ರಾಮೀಣ ಅಭ್ಯರ್ಥಿಗಳು ಹಾಗೂ ಕನ್ನಡ ಮಾಧ್ಯಮ ಅಭ್ಯರ್ಥಿಗಳ ಮೀಸಲಾತಿಗಳಿಗೆ ಅರ್ಹ ಅಭ್ಯರ್ಥಿಗಳು ಲಭ್ಯವಿರದೇ ಇದ್ದ ಪಕ್ಷದಲ್ಲಿ, ಆ ಹುದ್ದೆಗಳನ್ನು ಆಯಾ *ಪಂಗಡಗಳ* ಇತರೆ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು. ಆಯಾ ಪಂಗಡಗಳ ಇತರೆ ಅಭ್ಯರ್ಥಿಗಳೂ ಸಹ ಲಭ್ಯವಾಗದಿದ್ದಲ್ಲಿ, ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳಿಗೆ ಮೀಸಲಾದ ಹುದ್ದೆಗಳನ್ನು ಹೊರತುಪಡಿಸಿ ಇನ್ನುಳಿದ ಹಿಂದುಳಿದ ವರ್ಗಗಳ ಹುದ್ದೆಗಳನ್ನು ಸಾಮಾನ್ಯ ವರ್ಗದ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು.

**ವಯೋಮಿತಿ :** ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಗಳು ಕನಿಷ್ಟ 18 ವರ್ಷ ವಯೋಮಿತಿ ಹೊಂದಿರಬೇಕು ಹಾಗೂ ಈ ಕೆಳಗೆ ತಿಳಿಸಿರುವಂತೆ ಗರಿಷ್ಟ ವಯೋಮಿತಿಯನ್ನು ಮೀರಿರಬಾರದು.

(i) ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ವರ್ಗ ಹಾಗೂ ಪ್ರವರ್ಗ– I ರ ಹಿಂದುಳಿದ ವರ್ಗದ ಅಭ್ಯರ್ಥಿಗಳಿಗೆ ಸಂಬಂಧಿಸಿದ ಪ್ರಾಧಿಕಾರ ನೀಡುವ ಜಾತಿ ದೃಢೀಕರಣ ಪತ್ರ ಹಾಜರುಪಡಿಸಿದಲ್ಲಿ ಗರಿಷ್ಟ 40 ವರ್ಷ.

(ii) ಪ್ರವರ್ಗ 2–ಎ, 2–ಬಿ, 3–ಎ ಮತ್ತು 3–ಬಿ ಗಳಿಗೆ ಸೇರಿದ ಅಭ್ಯರ್ಥಿಗಳಿಗೆ ಸಂಬಂಧಿಸಿದ ಪ್ರಾಧಿಕಾರ ನೀಡುವ ಜಾತಿ ದೃಢೀಕರಣ ಪತ್ರ ಹಾಜರುಪಡಿಸಿದಲ್ಲಿ ಗರಿಷ್ಟ 38 ವರ್ಷ.

(iii) ಸಾಮಾನ್ಯ ವರ್ಗದ ಅಭ್ಯರ್ಥಿಗಳಿಗೆ 35 ವರ್ಷ.

**ವಯೋಮಿತಿ ಸಡಿಲಿಕೆ :** ಸರ್ಕಾರಿ ಸೇವೆಯಲ್ಲಿರುವವರಿಗೆ, ವಿಧವೆಯರಿಗೆ, ಮಾಜಿ ಸೈನಿಕರಿಗೆ ಹಾಗೂ ಅಂಗವಿಕಲರಿಗೆ ನಿಯಮಾನುಸಾರ ವಯೋಮಿತಿಯಲ್ಲಿ ಸಡಿಲಿಕೆ ನೀಡಲಾಗುವುದು.

**ಖಾಯಂ ಪೂರ್ವ ಸೇವಾವಧಿಃ** ಆಯ್ಕೆಗೊಂಡ ಅಭ್ಯರ್ಥಿಗಳು ಕರ್ನಾಟಕ ನಾಗರೀಕ ಸೇವಾ (ಪರಿವೀಕ್ಷಣಾ) ನಿಯಮಗಳು 1977ರ ಅಡಿಯಲ್ಲಿ 2 ವರ್ಷಗಳ ಕಾಲದ ಪರಿವೀಕ್ಷಣಾ ಅವಧಿಯನ್ನು ನಿಗದಿಪಡಿಸಿದ ಕನ್ನಡ ಭಾಷಾ ಪರೀಕ್ಷೆ ಹಾಗೂ ಇತರ ಇಲಾಖಾ ಪರೀಕ್ಷೆಗಳಲ್ಲಿ ತೇರ್ಗಡೆಯೊಗಬೇಕಾಗುತ್ತದೆ.

**ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ವಿಧಾನಃ** ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳು ತಮ್ಮ ನೇಮಕಾತಿ ಪ್ರಾಧಿಕಾರದಿಂದ ನಿರಾಕ್ಷೇಪಣೆ ಪ್ರಮಾಣ ಪತ್ರವನ್ನು ಪಡೆದು ಅರ್ಜಿಯನ್ನು ಸಮುಚಿತ ಮಾರ್ಗದ ಮುಖಾಂತರ ಸಲ್ಲಿಸತಕ್ಕದ್ದು.

**ಅರ್ಜಿ ಸಲ್ಲಿಸುವ ವಿಧಾನಃ** ಈ ಪ್ರಕಟಣೆಯೊಂದಿಗೆ ಲಗತ್ತಿಸಿರುವ ಅರ್ಜಿ ನಮೂನೆಯನ್ನು ಬೆರಳಚ್ಚು ಪ್ರತಿ/ಗಣಕೀಕೃತ ಪ್ರತಿಯಲ್ಲಿ ತಯಾರಿಸಿ ತಮ್ಮ ಸ್ವಹಸ್ತಾಕ್ಷರದಲ್ಲಿ ಭರ್ತಿ ಮಾಡಿ ಸ್ವಯಂ ದೃಢೀಕೃತ ಪಾಸ್‌ಪೋರ್ಟ್ ಗಾತ್ರದ ಭಾವಚಿತ್ರವನ್ನು ಅಂಟಿಸಿದ ಮತ್ತು ಮೀಸಲಾತಿ, ವಯೋಮಿತಿ, ವಿದ್ಯಾರ್ಹತೆ, ಜಾತಿಗಳಿಗೆ ಸಂಬಂಧಿಸಿದ ನಿಗದಿತ ಪ್ರಾಧಿಕಾರದವರು ನೀಡಿದ ಪ್ರಮಾಣ ಪತ್ರಗಳನ್ನು ಸ್ವಯಂ ದೃಢೀಕರಿಸಿ ಅರ್ಜಿಯೊಂದಿಗೆ ಲಗತ್ತಿಸಿ ಅರ್ಜಿಯನ್ನು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ದಕ್ಷಿಣ ಕನ್ನಡ, ಮಂಗಳೂರು–575 003 ದಿನಾಂಕ **12–12–2011** ರ ಸಂಜೆ 5.00 ಗಂಟೆ ಅವಧಿಯ ಒಳಗೆ ತಲುಪುವಂತೆ ಕಳುಹಿಸತಕ್ಕದ್ದು. ಅರ್ಜಿದಾರರು ಯಾವ ಹುದ್ದೆಗೆ ಅರ್ಜಿಗಳನ್ನು ಸಲ್ಲಿಸುತ್ತಾರೆ ಎಂಬುದನ್ನು ದಪ್ಪ ಅಕ್ಷರದಲ್ಲಿ ಲಕೋಟೆಯ ಮೇಲೆ ನಮೂದಿಸತಕ್ಕದ್ದು.

**ಪ್ರಮುಖವಾದ ಸೂಚನೆಗಳುಃ**

ಅರ್ಜಿಯೊಂದಿಗೆ ಅಭ್ಯರ್ಥಿಗಳು ಕೆಳಕಂಡ ದಾಖಲೆಗಳನ್ನು ಒಂದೊಂದು ಛಾಯಾ ಪ್ರತಿ (ಫೋಟೋ ಕಾಪಿ/ಜೆರಾಕ್ಸ್) ಗಳನ್ನು ಸ್ವಯಂ–ದೃಢೀಕರಿಸಿ ಅರ್ಜಿಯೊಂದಿಗೆ ಲಗತ್ತಿಸಬೇಕು. (ಮೂಲಪ್ರತಿಗಳನ್ನು ಲಗತ್ತಿಸಬಾರದು)

ಹುದ್ದೆಗೆ ನಿಗದಿಪಡಿಸಲಾದ ವಿದ್ಯಾರ್ಹತೆಯ ಎಲ್ಲಾ ವರ್ಷಗಳ ಅಂಕಪಟ್ಟಿಗಳು ಹಾಗೂ ಪ್ರಮಾಣ ಪತ್ರಗಳು.

(1) ಜನ್ಮದಿನಾಂಕವನ್ನು ನಮೂದಿಸಿರುವ ಎಸ್‌ಎಸ್‌ಎಲ್‌ಸಿ ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣ ಪತ್ರ/7ನೇ ತರಗತಿಯ ವಿದ್ಯಾರ್ಹತೆ ಹೊಂದಿರುವವರಿಗೆ ಜನನ ದಿನಾಂಕವನ್ನು ನಮೂದಿಸಿರುವ ಅಂಕಪಟ್ಟಿ ಅಥವಾ ವರ್ಗಾವಣೆ ಪ್ರಮಾಣ ಪತ್ರ.

(2) ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಅಭ್ಯರ್ಥಿಗಳು ನಮೂನೆ 'ಡಿ'ಯಲ್ಲಿ ಪ್ರವರ್ಗ– Iರ ಅಭ್ಯರ್ಥಿಗಳು ನಮೂನೆ 'ಇ' ಯಲ್ಲಿ ಮತ್ತು 2ಎ, 2 ಬಿ, 3ಎ ಮತ್ತು 3 ಬಿ ಗೆ ಸೇರಿದ ಅಭ್ಯರ್ಥಿಗಳು ನಮೂನೆ 'ಎಫ್' ನಲ್ಲಿ ಸಂಬಂಧಿಸಿದ ತಹಸೀಲ್ದಾರರಿಂದ ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳನ್ನು ಪಡೆದು ಸಲ್ಲಿಸಬೇಕು.

(3) ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ/96/ಸೇನನಿ/2005, ದಿನಾಂಕ 10–08–2005 ರ ಪ್ರಕಾರ ನಿಗದಿತ ನಮೂನೆ–2 ರಲ್ಲಿ ಅಧಿಕಾರಿಗಳಿಂದ ಪಡೆದು ಅದನ್ನು ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ಸಹಿ ಮಾಡಿಸಿ ಸಲ್ಲಿಸಬೇಕು. ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ

ವರ್ಗಗಳಿಗೆ ಸೇರಿದ ಅಭ್ಯರ್ಥಿಗಳ ಮೀಸಲಾತಿ ಪ್ರಮಾಣ ಪತ್ರಗಳು ತಿರಸ್ಕೃತಗೊಂಡಲ್ಲಿ ಅವರು ಗ್ರಾಮೀಣ ಮೀಸಲಾತಿಗೂ ಅನರ್ಹರಾಗುತ್ತಾರೆ.

(4) ಗ್ರಾಮೀಣ ಮೀಸಲಾತಿಯನ್ನು ಕೋರುವ ಸಾಮಾನ್ಯ ವರ್ಗದ ಅಭ್ಯರ್ಥಿಗಳು ಪ್ರಮಾಣ ಪತ್ರ ನಮೂನೆ–2 ರ ಜೊತೆ ನಮೂನೆ–1 ರಲ್ಲೂ ದೃಢೀಕರಣ ಪತ್ರವನ್ನು ಸಲ್ಲಿಸುವುದು.

(5) ಕನ್ನಡ ಮಾಧ್ಯಮ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ನಿಗದಿತ ನಮೂನೆಯಲ್ಲಿ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಮತ್ತು ಮೊಹರಿನೊಂದಿಗೆ ಪ್ರಮಾಣ ಪತ್ರವನ್ನು ಸಲ್ಲಿಸುವುದು.

(6) ಅಂಗವಿಕಲ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ವೈದ್ಯಕೀಯ ಪ್ರಮಾಣ ಪತ್ರವನ್ನು ದಿನಾಂಕ 19–11–2005 ರ ಸರ್ಕಾರದ ಅಧಿಕೃತ ಜ್ಞಾಪನಾ ಸಂಖ್ಯೆ: ಸಿಆಸುಇ/115/ಸೇನನಿ/2005 ರಲ್ಲಿ ನಿಗದಿಪಡಿಸಿದ ನಮಾನೆಯಲ್ಲಿ ಅಂಗವಿಕಲತೆಯ ಬಗ್ಗೆ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯಿಂದ ಪ್ರಮಾಣ ಪತ್ರವನ್ನು ಪಡೆದು ಸಲ್ಲಿಸಬೇಕು.

(7) ಯೋಜನಾ ನಿರಾಶ್ರಿತ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ/44/ಸೇನನಿ/2001, ದಿನಾಂಕ 27–07–2001 ರಲ್ಲಿ ನಿಗದಿಪಡಿಸಿದ ನಮೂನೆಯಲ್ಲಿ ಸಂಬಂಧಿಸಿದ ತಹಶೀಲ್ದಾರರಿಂದ ಪ್ರಮಾಣ ಪತ್ರವನ್ನು ಪಡೆದು ಸಲ್ಲಿಸತಕ್ಕದ್ದು.

(8) ಮಾಜಿ ಸೈನಿಕ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸೈನಿಕ ಸೇವೆಯಿಂದ ಬಿಡುಗಡೆಯಾದ/ವಿಮುಕ್ತಿ ಹೊಂದಿದ ಬಗೆಗಿನ ಪ್ರಮಾಣ ಪತ್ರವನ್ನು ಸಲ್ಲಿಸುವುದು.

(9) ವಾಹನ ಚಾಲನೆಯ ಪರವಾನಿಗೆ ಪತ್ರ (ಆದೇಶಿಕ ಜ್ಯಾರಿಕಾರರ ಹುದ್ದೆಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಮಾತ್ರ)

(10) ಭಾರೀ ವಾಹನ ಚಾಲನೆಯ ಪರವಾನಿಗೆ ಪತ್ರ (ವಾಹನ ಚಾಲಕ ಹುದ್ದೆಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಮಾತ್ರ)

(11) ವಿಧವೆಯರು, ಜೀತ ಕಾರ್ಮಿಕರು ಹಾಗೂ ವಯೋಮಿತಿ ರಿಯಾಯಿತಿಗೆ ಅರ್ಹರಾದ ಇನ್ನಿತರರು ವಯೋಮಿತಿ ರಿಯಾಯಿತಿ ಕೋರಲು ಸಕ್ಷಮ ಪ್ರಾಧಿಕಾರರಿಂದ ಪಡೆದ ಪ್ರಮಾಣ ಪತ್ರವನು ಸಲ್ಲಿಸುವುದು.

(12) ಅಭ್ಯರ್ಥಿಯು ಕೊನೆಯಲ್ಲಿ ವಿದ್ಯಾಭ್ಯಾಸ ಮಾಡಿದ ಶಾಲಾಃಕಾಲೇಜಿನ ಮುಖ್ಯೋಪಾಧ್ಯಾಯರುಃ ಪ್ರಾಂಶುಪಾಲರಿಂದ ಪಡೆದ ಒಂದು ನಡತೆ ಪ್ರಮಾಣ ಪತ್ರ.

(13) ಅಭ್ಯರ್ಥಿಯ ನಡತೆಯನ್ನು ದೃಢೀಕರಿಸುವ ಬಗ್ಗೆ ಅವನು ಓದಿರುವ ವಿದ್ಯಾಸಂಸ್ಥೆಗಳಿಗೆ ಸಂಬಂಧಪಡದ ಹಾಗೂ ಅಭ್ಯರ್ಥಿಯ ಸಂಬಂಧಿಗಳಲ್ಲದ ಇಬ್ಬರು ಸ್ಥಳೀಯ ಗಣ್ಯವ್ಯಕ್ತಿಗಳಿಂದ ಪಡೆದ 6 ತಿಂಗಳ ಈಚೆಗಿನ ಎರಡು ನಡತೆ ಪ್ರಮಾಣ ಪತ್ರಗಳು.

(14) ಅರ್ಜಿಯೊಂದಿಗೆ ಲಗತ್ತಿಸುವ ಎಲ್ಲಾ ಪ್ರಮಾಣ ಪತ್ರಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಪಡೆದುಕೊಂಡಿರಬೇಕು ಮತ್ತು ಕಡ್ಡಾಯವಾಗಿ ಸ್ವಯಂ ದೃಢೀಕರಿಸಿರಬೇಕು.

**ಇತರ ಸೂಚನೆಗಳುಃ**

(1) ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕವು ಸಾರ್ವತ್ರಿಕ ರಜಾ ದಿನವಾಗಿದ್ದರೆ ಮುಂದಿನ ಕಛೇರಿ ಕೆಲಸದ ದಿನವು ಅರ್ಜಿಗಳನ್ನು ಸ್ವೀಕರಿಸಲು ಕೊನೆಯ ದಿನಾಂಕವಾಗುವುದು.

(2) ಅರ್ಜಿಯೊಂದಿಗೆ 5 ರೂಪಾಯಿಯ ಅಂಚೆ ಮುದ್ರಾಂಕ (Postal Stamp) ವನ್ನು ಹೊಂದಿರುವ ಸ್ವ–ವಿಳಾಸದ ಲಕೋಟೆಯನ್ನು ಸಲ್ಲಿಸತಕ್ಕದ್ದು.

(3) ಅರ್ಜಿಯೊಂದಿಗೆ ಅಭ್ಯರ್ಥಿಗಳು ತಮ್ಮ ಇತ್ತೀಚಿನ ಒಂದು ಭಾವಚಿತ್ರವನ್ನು ಸ್ವಯಂ–ದೃಢೀಕರಿಸಿ ಲಗತ್ತಿಸಬೇಕು.

(4) ಶೀಘ್ರಲಿಪಿಗಾರರು, ಬೆರಳಚ್ಚುಗಾರರು ಮತ್ತು ಬೆರಳಚ್ಚು–ನಕಲುಗಾರರ ಹುದ್ದೆಗಳಿಗೆ ಎಲ್ಲಾ ಅರ್ಹ ಅಭ್ಯರ್ಥಿಗಳಿಗೂ ಅರ್ಹತಾ–ಸ್ಪರ್ಧಾತ್ಮಕ ಪರೀಕ್ಷೆ ನಡೆಸಲಾಗುವುದು.

(5) ಶೀಘ್ರಲಿಪಿಗಾರರು, ಬೆರಳಚ್ಚುಗಾರರು ಮತ್ತು ಬೆರಳಚ್ಚು–ನಕಲುಗಾರರ ಹುದ್ದೆಗೆ ಅರ್ಹತೆಯ ಆಧಾರದ ಮೇಲೆ ಒಂದು ಹುದ್ದೆಗೆ 5 ಅಭ್ಯರ್ಥಿಗಳನ್ನು ಮಾತ್ರ ಸಂದರ್ಶನಕ್ಕೆ ಕರೆಯಲಾಗುವುದು.

(6) ಸಂದರ್ಶನಕ್ಕೆ ಆಯ್ಕೆಯಾದ ಅಭ್ಯರ್ಥಿಗಳು ತಮ್ಮ ಸ್ವಂತ ಖರ್ಚಿನಲ್ಲಿಯೇ ಸಂದರ್ಶನಕ್ಕೆ ಹಾಜರಾಗಬೇಕು ಹಾಗೂ ಸಂದರ್ಶನ ಪತ್ರ ಬರದಿರುವ ಅಭ್ಯರ್ಥಿಗಳು ಸಂದರ್ಶನಕ್ಕೆ ಅರ್ಹರಲ್ಲವೆಂದು ಭಾವಿಸಿಕೊಳ್ಳತಕ್ಕದ್ದು.

(7) ಆಯ್ಕೆಯ ಸಂಬಂಧವಾಗಿ ಸಂದರ್ಶನಕ್ಕೆ ಅನರ್ಹರಾದ ಅಭ್ಯರ್ಥಿಗಳು ಈ ಕಛೇರಿಯೊಂದಿಗೆ ಯಾವುದೇ ಪತ್ರ ವ್ಯವಹಾರವನ್ನು ನಡೆಸಲು ಆಸ್ಪದವಿರುವುದಿಲ್ಲ.

(8) ಒಂದಕ್ಕಿಂತ ಹೆಚ್ಚು ಹುದ್ದೆಗಳಿಗೆ ಅರ್ಜಿ ಹಾಕಲು ಬಯಸುವವರು ಆಯಾ ಹುದ್ದೆಗಳಿಗೆ ಪ್ರತ್ಯೇಕವಾಗಿ ನಿಗದಿತ ಅರ್ಜಿ ನಮೂನೆಗಳಲ್ಲಿ ಅರ್ಜಿ ಸಲ್ಲಿಸತಕ್ಕದ್ದು.

**ಎಚ್.ಆರ್. ದೇಶಪಾಂಡೆ**

ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,

ದ.ಕ. ಮಂಗಳೂರು.

## ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಲಯ, ದಕ್ಷಿಣ ಕನ್ನಡ ಘಟಕದಲ್ಲಿ ____________ ಹುದ್ದೆಗೆ ಅರ್ಜಿಯ ನಮೂನೆ

ಪಾಸ್ ಪೋರ್ಟ್
ಅಳತೆಯ ಸ್ವಯಂದೃಢೀಕೃತ
